ಸಂಪುಟ : 10 ಸಂಚಿಕೆ: 305 ಪುಟ : 4+2 ಬೆಲೆ: 3.00 ಬುಧವಾರ ಜನವರಿ 21 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 305 Pages : 4+2 Price : 3.00 Wednesday January 21 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನೂತನ ರಾಷ್ಟ್ರೀಯ ಅಧ್ಯಕ್ಷ ನಿತಿನ್‌ಗೆ ಬೊಮ್ಮಾಯಿ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ನಿತಿನ್ ನಬಿನ್ ಅವರು ಅವಿರೋದವಾಗಿ ಆಯ್ಕೆಯಾಗಿದ್ದು, ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಈ ಕುರಿತು ಎಕ್ಸ್ ಮಾಡಿರುವ ಅವರು, ಪಕ್ಷ ಹಾಗೂ ದೇಶದ ಭವಿಷ್ಯದ ದೃಷ್ಟಿಯಿಂದ ಯುವ ನಾಯಕತ್ವದ ಮೇಲೆ ವಿಶ್ವಾಸ ಇಟ್ಟು ಜವಾಬ್ದಾರಿ ನೀಡಿರುವ ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ಕೇಂದ್ರ ಗೃಹ ಸಚಿವರಾದ ಅಮಿತ್ ಶಾ, ಹಾಗೂ ನಿರ್ಗಮಿತ ಅಧ್ಯಕ್ಷರಾದ ಜೆ.ಪಿ. ನಡ್ಡಾ ಅವರಿಗೆ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸುತ್ತೇನೆ. ವಿಶ್ವದಲ್ಲಿ ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಪಕ್ಷವನ್ನು ನೂತನ ಅಧ್ಯಕ್ಷರಾದ ನಿತಿನ್ ನಬಿನ್ ಅವರು ಇನ್ನಷ್ಟು ಎತ್ತರಕ್ಕೆ ತೆಗೆದುಕೊಂಡು ಹೋಗುತ್ತಾರೆ ಎನ್ನುವ ವಿಶ್ವಾಸ ಇದೆ ಎಂದು ಬೊಮ್ಮಾಯಿ ತಿಳಿಸಿದ್ದಾರೆ.

## ಕೃಷಿ ಹೊಂಡಕ್ಕೆ ತಂತಿ ಬೇಲಿ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನಿಂದ ಕರ್ನಾಟಕ ಸರ್ಕಾರದಿಂದ ಮರುಜಾರಿಗೊಳಿಸಲಾದ ಕೃಷಿ ಭಾಗ್ಯ ಯೋಜನೆಯನ್ನು ಪ್ಯಾಕೇಜ್ ಮಾದರಿಯಲ್ಲಿ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೃಷಿ ಹೊಂಡಗಳಲ್ಲಿ ಮಕ್ಕಳು ಬಿದ್ದು ಮರಣ ಹೊಂದಿರುವ ಪ್ರಕರಣಗಳು ವರದಿಯಾಗಿವೆ. ಈ ಸಂಬಂಧ ಕೃಷಿ ಹೊಂಡ ಹಾಗೂ ಇನ್ನಿತರ ಜಲಮೂಲಗಳಲ್ಲಿ ಮಕ್ಕಳು ಬಿದ್ದು ಅಪಾಯಕ್ಕೊಳಗಾಗದಂತೆ ರಕ್ಷಿಸುವುದು ಅವಶ್ಯಕವಾಗಿರುತ್ತದೆ. ಆದ್ದರಿಂದ ಮಕ್ಕಳು ಸೇರಿದಂತೆ ಯಾವುದೇ ಜನರು / ಜಾನುವಾರು ಕೃಷಿ ಹೊಂಡಗಳಲ್ಲಿ ಆಕಸ್ಮಿಕವಾಗಿ ಬಿದ್ದು ಅವಘಡಗಳು / ಪ್ರಾಣನಷ್ಟ ಸಂಭವಿಸದಂತೆ ತಡೆಯಲು ಕೃಷಿಭಾಗ್ಯ ಯೋಜನೆಯ ಮಾರ್ಗಸೂಚಿಯಲ್ಲಿ ಸೂಚಿಸಿರುವಂತೆ ರೈತರು ಕೃಷಿ ಹೊಂಡ ನಿರ್ಮಿಸಿಕೊಂಡ ನಂತರ ಸುತ್ತಲೂ ತಂತಿಬೇಲಿಯನ್ನು ಅಳವಡಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

ಕೃಷಿ ಭಾಗ್ಯಯೋಜನೆಯಡಿ 2023-24 ಹಾಗೂ 2024-25ನೇ ಸಾಲಿನಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಿಕೊಂಡು ಕೃಷಿ ಇಲಾಖೆಯಿಂದ ಸಹಾಯಧನವನ್ನು ಪಡೆದುಕೊಂಡು ತಂತಿಬೇಲಿಯನ್ನು ಅಳವಡಿಕೊಳ್ಳದೇ ಇರುವ ರೈತರಿಗೂ ಸಹ ಮಕ್ಕಳು, ಮನುಷ್ಯರು ಹಾಗೂ ಜಾನುವಾರುಗಳು ಕೃಷಿ ಹೊಂಡಗಳಲ್ಲಿ ಆಕಸ್ಮಿಕವಾಗಿ ಬಿದ್ದು ಅವಘಡಗಳು / ಪ್ರಾಣ ನಷ್ಟ ಸಂಭವಿಸದಂತೆ ತಡೆಯಲು ಪ್ರಸ್ತುತ ಸಾಲಿನಲ್ಲಿ ತಂತಿಬೇಲಿ ಅಳವಡಿಸಿಕೊಳ್ಳಲು ಸಹಾಯಧನವನ್ನು ನೀಡಲು ಸರ್ಕಾರವು ನಿರ್ಧರಿಸಿದೆ.

ಆದ್ದರಿಂದ 2023-24 ಹಾಗೂ 2024-25ನೇ ಸಾಲಿನಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಿಕೊಂಡ ಹಾಗೂ ತಂತಿಬೇಲಿಯನ್ನು ಅಳವಡಿಸಿಕೊಳ್ಳದೇ ಇರುವ ರೈತರು ತಮ್ಮ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡು ಕೃಷಿ ಹೊಂಡದ ಸುತ್ತಲೂ ತಂತಿಬೇಲಿಯನ್ನು ಅಳವಡಿಸಿಕೊಂಡು ಸಹಾಯಧನ ಪಡೆದುಕೊಳ್ಳಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ಮೌಲಾನಾ ಅಜಾದ ಪಬ್ಲಿಕ್ ಶಾಲೆಯ ನೂತನ ಕಟ್ಟಡ ಲೋಕಾರ್ಪಣೆಗೊಳಿಸಿದ ಸಚಿವ ಬಿ.ಝಡ್. ಜಮೀರ ಅಹ್ಮದ್ ಖಾನ್

# ಅಲ್ಪಸಂಖ್ಯಾತ ಮಕ್ಕಳ ಶಿಕ್ಷಣಕ್ಕೆ ಸರ್ಕಾರದ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ಅಲ್ಪಸಂಖ್ಯಾತ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ 4,500 ಕೋಟಿ ರೂ ಬಜೆಟ್ ಒದಗಿಸಲಾಗಿದೆ. ಈ ಅನುದಾನದ ಪ್ರಮುಖ ಭಾಗವನ್ನು ಮಕ್ಕಳ ಶಿಕ್ಷಣಕ್ಕೆ ಬಳಸಲಾಗುತ್ತಿದೆ ಎಂದು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರಾದ ಬಿ.ಝಡ್. ಜಮೀರ ಅಹ್ಮದ್ ಖಾನ್ ಹೇಳಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಮಂಗಳವಾರ ಕರ್ನಾಟಕ ಮೌಲಾನಾ ಅಜಾದ ಪಬ್ಲಿಕ್ ಶಾಲೆ (ಆಂಗ್ಲ ಮಾಧ್ಯಮ)ಯ ನೂತನ ಕಟ್ಟಡದ ಲೋಕಾರ್ಪಣೆ ಹಾಗೂ ಹೆಚ್ಚುವರಿ ತರಗತಿಗಳ ಕಟ್ಟಡ ಶಂಕುಸ್ಥಾಪನೆ ಸಮಾರಂಭವನ್ನು ನಗರದ ಗಂಗಿಮಡಿಯಲ್ಲಿ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 2.38 ಲಕ್ಷಕ್ಕೂ ಅಧಿಕ ಮಕ್ಕಳು ವಸತಿ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿದ್ದಾರೆ. ಈ ಹಿಂದೆ ಸಿಎಂ ಸಿದ್ದರಾಮಯ್ಯ ಅವರ ಅವಧಿಯಲ್ಲಿ ಅನೇಕ ವಸತಿ ಶಾಲೆಗಳು ಆರಂಭವಾಗಿದ್ದು, ಇದೀಗ 100 ವಸತಿ ಶಾಲೆಗಳನ್ನು ಸ್ಥಾಪಿಸಲಾಗುತ್ತಿದೆ. 100 ಮದರಸಾಗಳಲ್ಲಿ 9-10ನೇ ತರಗತಿ ಓದುತ್ತಿರುವ ಸುಮಾರು 5 ಸಾವಿರ ಮಕ್ಕಳು ಉತ್ತೀರ್ಣರಾಗುತ್ತಿದ್ದಾರೆ. ಮದರಸಾಗಳಲ್ಲಿಯೂ ಮಕ್ಕಳಿಗೆ ಉತ್ತಮ ಶಿಕ್ಷಣ ದೊರಕಬೇಕು ಎಂಬ ಕಳಕಳಿಯಿಂದ ಸರ್ಕಾರ ಕೆಲಸ ಮಾಡುತ್ತಿದೆ ಎಂದರು.



ಕಡಿಮೆ ಅನುದಾನದಲ್ಲೇ ಗುಣಮಟ್ಟದ ಹಾಗೂ ವಿಶಾಲ ಕಟ್ಟಡ ನಿರ್ಮಾಣವಾಗಿರುವುದು ಸಂತೋಷದ ವಿಷಯ. ಈ ಕಾರ್ಯಕ್ಕೆ ಶ್ರಮಿಸಿದ ಎಲ್ಲರಿಗೂ ಅಭಿನಂದನೆಗಳು. ವಿಶೇಷವಾಗಿ ಸಚಿವ ಡಾ. ಎಚ್. ಕೆ. ಪಾಟೀಲ ಅವರ ಸಹಕಾರಕ್ಕೆ ಸಚಿವ ಜಮೀರ ಅಹ್ಮದ್ ಖಾನ್ ಧನ್ಯವಾದ ತಿಳಿಸಿದರು.

ವೇದಿಕೆಯಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಗೌಡ ಪಾಟೀಲ, ಫಾರುಕ್ ಹುಬ್ಬಳ್ಳಿ, ಎ.ಎಂ. ಹಿಂಡಸಗೇರಿ, ಬಸವರಾಜ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಕೆ.ಆರ್.ಐ.ಡಿ.ಎಲ್ ಕಾರ್ಯನಿರ್ವಾಹಕ ಅಭಿಯಂತರ ಅನಿಲ ಪಾಟೀಲ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅಮಿತ್ ಬಿದರಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

> ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ, ಶಾಲಾ ನೂತನ ಕಟ್ಟಡ ನಿರ್ಮಾಣಕ್ಕೆ 235 ಲಕ್ಷ ರೂ ಹಾಗೂ ಹೆಚ್ಚುವರಿ ತರಗತಿಗಳ ಕಟ್ಟಡ ನಿರ್ಮಾಣಕ್ಕೆ 143 ಲಕ್ಷ ರೂ ವೆಚ್ಚದ ಕಾಮಗಾರಿಗೆ ಇಂದು ಚಾಲನೆ ನೀಡಲಾಗಿದೆ. ಗುಣಮಟ್ಟದ ಕಾಮಗಾರಿಗೆ ಶ್ರಮಿಸಿದ ಎಲ್ಲರಿಗೂ ಅಭಿನಂದನೆಗಳು. ಈ ಕಟ್ಟಡದಲ್ಲಿ ಅಭ್ಯಾಸ ಮಾಡುವ ಎಲ್ಲ ಮಕ್ಕಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲಿ ಎಂದು ಶುಭ ಕೋರಿದರು.

### ಪತ್ರಿಕಾಗೋಷ್ಠಿಯಲ್ಲಿ ಸಮಗ್ರ ರೈತಪರ ಹೋರಾಟ ವೇದಿಕೆ ಅಧ್ಯಕ್ಷ ಮಂಜುನಾಥ ಮಾಗಡಿ ಅಸಮಾಧಾನ

# ತಾಲೂಕಿನಲ್ಲಿ ಅಧಿಕಾರಿಗಳು ಆಡಿದ್ದೇ ಆಟವಾಗಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಳೆಹಾನಿ ಪರಿಹಾರ ವಿತರಣೆಯಲ್ಲಿ ರೈತರಿಗೆ ಸಾಕಷ್ಟು ಅನ್ಯಾಯವಾಗಿದೆ ಎಂದು ಸಮಗ್ರ ರೈತಪರ ಹೋರಾಟ ವೇದಿಕೆ ಅಧ್ಯಕ್ಷ ಮಂಜುನಾಥ ಮಾಗಡಿ ಹಾಗೂ ರೈತ ಹನಮಂತಪ್ಪ ಚಿಂಚಲಿ ಆರೋಪಿಸಿದರು.

ಅವರು ಪಟ್ಟಣದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಲಕ್ಷ್ಮೇಶ್ವರ ತಾಲೂಕಿನಲ್ಲಿ ರೈತರ ಜಂಟಿ ಖಾತೆಗೆ ಪ್ರತ್ಯೇಕ ಎಫ್‌ಐಡಿ ಇದ್ದರೂ ಬೆಳೆ ದೃಢೀಕರಣ ಆ್ಯಪ್ ಆಧರಿಸಿ ಬೆಳೆಹಾನಿ ಪರಿಹಾರ ಕೇವಲ ಒಬ್ಬ ರೈತರಿಗೆ ಹಾಕಿದ್ದಾರೆ. ಗದಗ ತಾಲೂಕಿನಲ್ಲಿ ರೈತರ ಜಂಟಿ ಖಾತೆಗೆ ಎಫ್‌ಐಡಿ ಆಧರಿಸಿ ಬೆಳೆಹಾನಿ ಪರಿಹಾರ ಪ್ರತ್ಯೇಕ ಖಾತೆಗೆ ಹಾಕಿದ್ದಾರೆ. ಲಕ್ಷ್ಮೇಶ್ವರ ತಾಲೂಕಿನಲ್ಲಿ ಅಧಿಕಾರಿಗಳು ಎಫ್‌ಐಡಿ ನಿರ್ಲಕ್ಷ್ಯ ಮಾಡಿದ್ದಾರೆ. ಈ ಬಗ್ಗೆ ಅಧಿಕಾರಿಗಳಿಗೆ ಪ್ರಶ್ನೆ ಮಾಡಿದರೆ ಜಿಲ್ಲಾಧಿಕಾರಿ, ಎಸಿ ಹಾಗೂ ಕೃಷಿ ಇಲಾಖೆಯತ್ತ ಬೊಟ್ಟು ಮಾಡಿ ಜಾರಿಕೊಳ್ಳುತ್ತಿದ್ದಾರೆ.



ತಾಲೂಕಿನಲ್ಲಿ ಅಧಿಕಾರಿಗಳು ಆಡಿದ್ದೇ ಆಟವಾಗಿದೆ. ಅಲ್ಲದೇ ಸರಕಾರ ಮೆಣಸಿನಕಾಯಿಗೆ ಮಧ್ಯಂತರ ಬೆಳೆಹಾನಿ ನೀಡಿದ್ದರೂ ಜಿಲ್ಲಾಡಳಿತ ಇದುವರೆಗೂ ರೈತರಿಗೆ ಮಧ್ಯಂತರ ಪರಿಹಾರ ನೀಡದಿರುವುದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ದೇವರು ವರ ಕೊಟ್ಟರೂ ಪೂಜಾರಿ ಕೊಡಲಿಲ್ಲ ಎನ್ನುವಂತಾಗಿದೆ. ಮೆಕ್ಕೆಜೋಳ ಬೆಳೆದ ರೈತರು ಬೆಂಬಲ ಬೆಲೆ (2400ರೂ) ಖರೀದಿ ಕೇಂದ್ರದಲ್ಲಿ ಮಾರಾಟ ಮಾಡಿ ಒಂದೂವರೆ ತಿಂಗಳಾದರೂ ಒಬ್ಬ ರೈತರಿಗೂ ನಯಾಪೈಸೆ ಹಣ ಸಂದಾಯ ಮಾಡಿಲ್ಲ. ರೈತರು ಸಂಕಷ್ಟದಲ್ಲಿದ್ದು, ಬೇಗನೆ ರೈತರ ಖಾತೆಗಳಿಗೆ ಹಣ ಜಮೆ ಮಾಡಬೇಕು ಎಂದು ಆಗ್ರಹಿಸಿದರು.

ನಾಗರಾಜ ಚಿಂಚಲಿ ಮಾತನಾಡಿ, ಮಂಜಲಾಪುರದಲ್ಲಿ ಇತ್ತೀಚೆಗೆ ವಿದ್ಯುತ್ ಅವಘಡದಿಂದ ರೈತರ ಮೆಕ್ಕೆಜೋಳ ಸಂಪೂರ್ಣ ಬೆಂಕಿಗಾಹುತಿಯಾಗಿದ್ದು, ರೈತರಿಗೆ ಕೂಡಲೇ ಪರಿಹಾರ ಕೊಡಬೇಕು. ಮೆಕ್ಕೆಜೋಳ ಖರೀದಿ ಕೇಂದ್ರದಲ್ಲಿ ಓರ್ವ ಜಿಲ್ಲಾ ಮಟ್ಟದ ಅಧಿಕಾರಿ ಕಾರ್ಯ ನಿರ್ವಹಿಸುವಂತಾಗಬೇಕು ಎಂದರು. ಈ ವೇಳೆ ರೈತ ಸಂಘಟನೆಗಳ ಪ್ರಮುಖರಾದ ಟಾಕಪ್ಪ ಸಾತಪುತೆ, ಬಸವರಾಜ ಹಿರೇಮನಿ, ರವಿ ಸಾತಪುತೆ, ಎನ್.ಆರ್. ಸಾತಪುತೆ ಹಲವರಿದ್ದರು.

> ರೈತ ಮುಖಂಡ ಪೂರ್ಣಾಜಿ ಖರಾಟೆ ಮಾತನಾಡಿ, ಈಗಾಗಲೇ ಮುಕ್ತ ಮಾರುಕಟ್ಟೆಗೆ ಕಡಲೆ ಫಸಲು ಮಾರಾಟಕ್ಕೆ ಬರುತ್ತಿದ್ದಂತೆಯೇ ಏಕಾಏಕಿ 500 ರೂ ಬೆಲೆ ಕುಸಿತವಾಗಿದೆ. ಕೂಡಲೇ ಸರ್ಕಾರ ಬೆಂಬಲ ಬೆಲೆಯಲ್ಲಿ (5875 ರೂ) ಖರೀದಿಸಲು ಕೇಂದ್ರ ಪ್ರಾರಂಭಿಸಬೇಕು. ಇಲ್ಲದಿದ್ದರೆ ರೈತ ಸಂಘಟನೆಗೊಳಡಗೂಡಿ ಮತ್ತೆ ಹೋರಾಟಕ್ಕಿಳಿಯಬೇಕಾಗುತ್ತದೆ ಎಂದರು.

### 'ನಮ್ಮೊಳಗೊಬ್ಬ ಗಾಂಧಿ' ನಾಟಕ ಯಶಸ್ವಿ ಪ್ರಯೋಗ

# ಪ್ರತಿಯೊಬ್ಬರಲ್ಲೂ ಗಾಂಧೀಜಿ ಇದ್ದಾರೆ



■ವಿಜಯಸಾಕ್ಷಿ ಸುದ್ದಿ, ಗದಗ

ಸತ್ಯ, ಅಹಿಂಸೆ, ತ್ಯಾಗದ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದು-ಕೊಟ್ಟು, ಜಗತ್ತಿಗೆ ಮಾದರಿಯಾದ, ಜೀವನದ ಮೌಲ್ಯಗಳನ್ನು ತಮ್ಮ ಬದುಕಿನ ಮೂಲಕ ತೋರಿದ ಮಹಾತ್ಮ ಗಾಂಧೀಜಿಯವರು ಪ್ರತಿಯೊಬ್ಬರಲ್ಲೂ ಇದ್ದಾರೆ. ಅವರು ಬಿತ್ತಿದ ದೇಶಾಭಿಮಾನ, ದೇಶಭಕ್ತಿ ಇಂದಿಗೂ ನಮ್ಮಲ್ಲಿ ಜಾಗೃತವಾಗಿದ್ದು, ರಾಷ್ಟ್ರದ ಪ್ರಗತಿಗೆ ಕಾರಣವಾಗಿದೆ ಎಂದು ಗದಗ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಡಾ. ಬಸವರಾಜ ಬಳ್ಳಾರಿ ಅಭಿಪ್ರಾಯಪಟ್ಟರು.

ಅವರು ನಗರದ ವಿಶ್ವಕರ್ಮ ಸಮುದಾಯ ಭವನದಲ್ಲಿ ಸೋಮವಾರ ಸಂಜೆ ರಂಗಾಯಣ ಶಿವಮೊಗ್ಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ, ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ನಮ್ಮೊಳಗೊಬ್ಬ ಗಾಂಧಿ' ನಾಟಕ ಪ್ರಯೋಗ ಉದ್ಘಾಟಿಸಿ ಮಾತನಾಡಿದರು. ಜೀವಂತ ಅಭಿವ್ಯಕ್ತಿ ಕಲೆಯಾದ ರಂಗ ಕಲೆಗೆ ಗದಗ ಜಿಲ್ಲೆ ಐತಿಹಾಸಿಕ ಹಿನ್ನೆಲೆ ಹೊಂದಿದೆ.

ಶಿವಮೊಗ್ಗದ ರಂಗಾಯಣ ಪ್ರಸ್ತುತಪಡಿಸುವ 'ನಮ್ಮೊಳಗೊಬ್ಬ ಗಾಂಧಿ' ನಾಟಕ ಪ್ರದರ್ಶನ ಇಲ್ಲಿನ ಪ್ರೇಕ್ಷಕರಿಗೆ ಒಂದು ಉತ್ತಮ ಅವಕಾಶ ಎಂದರು.

▶▶ 3ನೇ ಪುಟಕ್ಕೆ

> ಹಿರಿಯ ರಂಗಕರ್ಮಿ ಸಶೀಲೇಂದ್ರ ಜೋಶಿ ಮಾತನಾಡಿ, ಕನ್ನಡ ರಂಗಭೂಮಿಗೆ ಗದಗ ಜಿಲ್ಲೆಯ ಕೊಡುಗೆ ಅಪಾರ. ಸಕ್ಕರಿ ಬಾಳಾಚಾರ್ಯರು, ಶಿರಹಟ್ಟಿಯ ವೆಂಕೊಬರಾಯರು, ಸದಾಶಿವರಾಯ ಗರುಡರು, ಜಯತೀರ್ಥ ಜೋಶಿ ಅವರ ರಂಗ ಸೇವೆ ಸದಾ ಸ್ಮರಣೀಯ ಎಂದರು.

## ಸಚಿವರಿಂದ ಗಂಗಿಮಡಿಯ ಅಪಾರ್ಟ್‌ಮೆಂಟ್ ವೀಕ್ಷಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಂಗಳವಾರ ಗಂಗಿಮಡಿಯಲ್ಲಿ ನಿರ್ಮಿಸಲಾದ ಅಪಾರ್ಟ್‌ಮೆಂಟ್‌ಗಳನ್ನು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರಾದ ಬಿ.ಝಡ್. ಜಮೀರ ಅಹ್ಮದ್ ಖಾನ್ ವೀಕ್ಷಿಸಿ ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ. ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ,

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಎಸ್.ಎನ್.ಬಳ್ಳಾರಿ, ಅಶೋಕ ಮಂದಾಲಿ, ಪಾರೂಕ್ ಹುಬ್ಬಳ್ಳಿ, ಎ.ಎಂ. ಹಿಂಡಸಗೇರಿ, ಬಸವರಾಜ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಇದ್ದರು.



## ವಿದ್ಯಾರ್ಥಿ ನಿಲಯದ ನೂತನ ಕಟ್ಟಡ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅಬ್ದುಲ್ ಕಲಾಂ ಸಮುದಾಯ ಭವನದ ಹತ್ತಿರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅಲ್ಪಸಂಖ್ಯಾತರ ಇಲಾಖೆಯಡಿಯಲ್ಲಿ ಅಂದಾಜು ಮೊತ್ತ 1209ಲಕ್ಷ ರೂಗಳ ಅನುದಾನದಲ್ಲಿ ನಿರ್ಮಿಸಲಾದ ಅಲ್ಪಸಂಖ್ಯಾತರ ಸಾಮಾನ್ಯ ವಿದ್ಯಾರ್ಥಿ ನಿಲಯದ ನೂತನ ಕಟ್ಟಡವನ್ನು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರಾದ ಬಿ.ಝಡ್. ಜಮೀರ ಅಹ್ಮದ್ ಖಾನ್ ಹಾಗೂ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ. ಪಾಟೀಲ ಉದ್ಘಾಟಿಸಿದರು.

ಈ ಸಂಧರ್ಭದಲ್ಲಿ ಶಾಸಕ ಜಿ ಎಸ್ ಪಾಟೀಲ , ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಎಸ್.ಎನ್. ಬಳ್ಳಾರಿ, ಅಶೋಕ ಮಂದಾಲಿ, ಪಾರುಕ್ ಹುಬ್ಬಳ್ಳಿ, ಎ.ಎಂ. ಹಿಂಡಸಗೇರಿ, ಬಸವರಾಜ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್,

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಇದ್ದರು.



ಲಕ್ಷ್ಮೇಶ್ವರದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣುಮಕ್ಕಳ ಶಾಲೆಯಲ್ಲಿ ಶ್ರೇಷ್ಠ ಕವಿ ಸಂತ ಯೋಗಿ ವೇಮನರ ಜಯಂತಿ ಆಚರಿಸಲಾಯಿತು. ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಮಕ್ಕಳು ಇದ್ದರು.

### ಮಮತಾ ದೊಡ್ಡಮನಿಯವರ 'ಮಾತಿಗಿಳಿದ ಹಣತೆ' ಪುಸ್ತಕ ಬಿಡುಗಡೆ

# ಅಧ್ಯಾಪಕರು ಓದುವ ಪ್ರವೃತ್ತಿಯನ್ನು ಹೆಚ್ಚಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅನುಭವಗಳಿಗೆ ಅಕ್ಷರ ತೊಡಿಸಿ ಕಾವ್ಯವಾಗಿಸುವ ಮೂಲಕ ಸಹೃದಯರಲ್ಲಿ ವಿಶಿಷ್ಠ ಅನುಭೂತಿಯನ್ನು ಉಂಟು ಮಾಡುವ ಕವಿ ಸದಾವಕಾಲ ಸ್ಮರಣೆಯಲ್ಲಿ ಉಳಿಯುತ್ತಾರೆ. ಪ್ರಚಲಿತ ಸಂಕಟಗಳನ್ನು ಕಾವ್ಯ ಒಳಗೊಂಡು ಒಳ ಮತ್ತು ಹೊರ ಬದಲಾವಣೆ ಕಾರಣವಾಗಬೇಕು. ಪ್ರವೃತ್ತಿಗಳು ಉತ್ತಮವಾಗಿದ್ದರೂ ಉತ್ತಮ ವ್ಯಕ್ತಿತ್ವ ನಿರ್ಮಾಣವಾಗುತ್ತದೆ. ಅಧ್ಯಾಪಕರು ಓದುವ ಪ್ರವೃತ್ತಿಯನ್ನು ಅಧಿಕಗೊಳಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಮನಿ ಅಭಿಪ್ರಾಯಪಟ್ಟರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಶಿಕ್ಷಕಿ ಮಮತಾ ಚ.ದೊಡ್ಡಮನಿ ಅವರ 'ಮಾತಿಗಿಳಿದ ಹಣತೆ' ಪುಸ್ತಕ ಲೋಕಾರ್ಪಣೆ ಮಾಡಿ ಮಾತನಾಡಿದರು.

ಪುಸ್ತಕ ಪರಿಚಯವನ್ನು ಮಾಡಿದ ಸಾಹಿತಿ ಶಿಲ್ಪಾ ಮ್ಯಾಗೇರಿ, ಹಣತೆ ಹೆಣ್ಣಿನ ಪ್ರತೀಕವಾಗಿ ಈ ಸಂಕಲನದಲ್ಲಿ ಮೂಡಿಬಂದಿದೆ. ನಿತ್ಯ ಜೀವನದ ಅನೇಕ ಸಂಗತಿಗಳು ಇಲ್ಲಿ ಅಕ್ಷರ ತೋರಣ ಕಟ್ಟಿವೆ. ಜೀವಪರ ವಿಚಾರಗಳನ್ನು ಕವಿತೆಗಳ ಮೂಲಕ ಹಂಚುವ ಕಾರ್ಯವನ್ನು ಕವಿ ಇಲ್ಲಿ ಮಾಡಿದ್ದಾರೆ. ಪುರುಷರಿಗಿಂತ ಮಹಿಳೆಯರ ವಿಚಾರಗಳು, ತಲ್ಲಣಗಳು ಬೇರೆಯಾಗಿರುವದರಿಂದ ಅವುಗಳನ್ನು ದಾಖಲಿಸುವ ಪ್ರಯತ್ನವನ್ನು ಈ ಸಂಕಲನದಲ್ಲಿ ಮಾಡಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಶಂಕರ ಹೂಗಾರ ಮಾತನಾಡಿ, ಶಿಕ್ಷಕರು ಸಾಹಿತ್ಯ, ಸಂಸ್ಕೃತಿಯ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳಲ್ಲೂ ಆಸಕ್ತಿ ಮೂಡಿಸಿ ನಮ್ಮ ಸಂಸ್ಕೃತಿ, ಪರಂಪರೆಯನ್ನು ಮುಂದಿನ ತಲೆಮಾರಿಗೆ ತಲುಪಿಸುವ ಕಾರ್ಯ ಮಾಡಬೇಕೆಂದು ತಿಳಿಸಿದರು.

ಸರಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಡಿ.ಎಸ್. ತಳವಾರ ಮಾತನಾಡಿ, ಸಾಹಿತ್ಯ, ಸಂಸ್ಕೃತಿಯ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ ಶಿಕ್ಷಕರನ್ನು ಇಲಾಖೆ ಗುರುತಿಸಿ ಗೌರವಿಸಬೇಕು. ಮಮತಾ ದೊಡ್ಡಮನಿ ಅವರು ವೃತ್ತಿ ದೈಹಿಕ ಶಿಕ್ಷಣ ಶಿಕ್ಷಕಿಯರಾಗಿದ್ದರೂ ಅವರ ಸಾಹಿತ್ಯ ಪ್ರೀತಿ ಮಾದರಿಯಾದುದು ಎಂದು ತಿಳಿಸಿದರು.

ಕವಯಿತ್ರಿ ಮಮತಾ ದೊಡ್ಡಮನಿ ತಮ್ಮ ಸಾಹಿತ್ಯ ಪಯಣವನ್ನು ವಿವರಿಸಿ, ಸಹಾಯ ಸಹಕಾರ ನೀಡಿದ ಸರ್ವರನ್ನು ಸ್ಮರಿಸಿದರು. ಡಿ.ಕೆ. ಕಲ್ಲೊಳ್ಳಿ, ಎಂ.ಐ. ಮುಗಳಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕವಿ ಎ.ಎಸ್. ಮಕಾನದಾರ ಅವರ ದರ್ವೇಶಿ ಪದ್ಯಗಳು ಕೃತಿಯ ಮುಖಪುಟ ಅನಾವರಣಗೊಳಿಸಲಾಯಿತು.

ಭಾಗ್ಯಶ್ರೀ ಹುರಕಡ್ಲಿ, ಕೊಟ್ರೇಶ ಜವಳಿ, ರಮಾ ಚಿಗಟೇರಿ, ಆನಂದ ಹಕ್ಕೆನ್ನವರ, ಸುಷ್ಮಾ ಹುಚ್ಚಣ್ಣವರ, ಕವನ ವಾಚಿಸಿದರು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ನೀಲಮ್ಮ ಅಂಗಡಿ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ, ಸಿ.ಕೆ.ಎಚ್. ಕಡಣಿ ಶಾಸ್ತ್ರಿ, ವಿ.ಕೆ. ಗುರುಮಠ, ವಿ.ಎಸ್. ದಲಾಲಿ, ವಿದ್ಯಾಧರ ದೊಡಮನಿ, ಎಸ್.ಎಂ. ಕಾತರಕಿ, ರತ್ನಕ್ಕ ಪಾಟೀಲ, ಪುಟ್ಟರಾಜ ಬೂದನೂರ, ರಾಜಶೇಖರ ಕರಡಿ, ಎಚ್.ಡಿ. ಕುರಿ, ಎಂ.ಎಂ. ಭೋಜೆದಾರ, ವಾಯ್.ಯು. ಅಣ್ಣಿಗೇರಿ, ಎಸ್. ಆರ್. ಮಟ್ಟಿ, ಎಲ್.ಎಲ್. ಚವ್ಹಾಣ, ಎಸ್.ಎಸ್. ಗಾಣಿಗೇರ, ಬಿ.ಎಸ್. ಚವಡಿ, ಎನ್.ಆರ್. ಹೂಗಾರ, ವಾಯ್.ಎಫ್. ನಾಯ್ಕರ, ಯು.ಎಸ್. ಕಣವಿ, ಶೈಲಶ್ರೀ ಕಪ್ಪರದ, ರತ್ನಾ ಪುರಂತರ, ಶೈಲಜಾ ಗಿಡ್ನಂದಿ, ರಶ್ಮಿ ಅಂಗಡಿ, ರಾಜೇಶ್ವರ ಬಡ್ನಿ, ಅನಸೂಯಾ ಮಿಟ್ಟಿ, ಮಂಜುಳಾ ವೆಂಕಟೇಶಯ್ಯ, ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಶಶಿಕಾಂತ ಕೊರ್ಲಹಳ್ಳಿ, ಅಂದಾನೆಪ್ಪ ವಿಭೂತಿ, ಕೊಟ್ರೇಶ ಉಪ್ಪಿನ, ಎಂ.ಎಚ್. ದೊಡ್ಡಮನಿ, ಸುಮಾ ಹುಚ್ಚಮ್ಮವರ, ಮಂಜುನಾಥ ಹುಚ್ಚಮ್ಮನವರ, ಮಹಾಂತೇಶ ಹುಚ್ಚಮ್ಮನವರ, ಪುಟ್ಟಪ್ಪ ಹುಚ್ಚಮ್ಮನವರ, ಶಂಕ್ರಮ್ಮ ಹುಚ್ಚಮ್ಮನವರ, ರಾಜಾಭಕ್ಷಿ ನದಾಫ್, ಕೋಟೆಪ್ಪ ಕೂರಗುಂದ, ಸೋಮಶೇಖರ ಕೆಂಗುಂಡಪ್ಪನವರ, ರಂಗಪ್ಪ ಬೂದನೂರ, ವಿನಾಯಕ ಉಪ್ಪಿನ, ಕಾರ್ತಿಕ ಉಪ್ಪಿನ, ಶಿವಕುಮಾರ ವಾಲಿ, ಅಮರೇಶ ರಾಂಪೂರ, ರಾಹುಲ ಗಿಡ್ನಂದಿ, ಸತೀಶ ಚನ್ನಪ್ಪಗೌಡ್ರ ಮೊದಲಾದವರು ಉಪಸ್ಥಿತರಿದ್ದರು.



ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಇಲ್ಲಿಯ ಕವಿತೆಗಳು ನೆಲಮೂಲ ಸಂಸ್ಕೃತಿಯನ್ನು ಪ್ರತಿನಿಧಿಸುತ್ತವೆ. ನಮ್ಮ ಬೆಳವಣಿಗೆಗೆ ಕಾರಣವಾಗಿರುವ ವ್ಯಕ್ತಿ ಮತ್ತು ವಸ್ತುಗಳ ಕುರಿತು ಕಾವ್ಯ ರಚಿಸಿದ್ದಾರೆ. ಇನ್ನಷ್ಟು ಆಳವಾದ ಅಧ್ಯಯನದ ಮೂಲಕ ಉತ್ತಮ ಕೃತಿಗಳು ರಚನೆಯಾಗಲಿ ಎಂಬ ಆಶಯವನ್ನು ವ್ಯಕ್ತಪಡಿಸಿದರು.

## ಶಬರಿಮಲೆ ಚಿನ್ನ ಕಳವು ಪ್ರಕರಣ: ಕೇರಳ, ಕರ್ನಾಟಕ, ತಮಿಳುನಾಡಿನ 21 ಸ್ಥಳಗಳಲ್ಲಿ ಇಡಿ ದಾಳಿ

■ ವಿಜಯಸಾಕ್ಷಿ ಸುದ್ದಿ, ಕೇರಳ

ಶಬರಿಮಲೆ ಚಿನ್ನ ಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ಅಕ್ರಮ ಹಣ ವರ್ಗಾವಣೆ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯ (ಇಡಿ) ಮಂಗಳವಾರ ಮೂರು ರಾಜ್ಯಗಳಲ್ಲಿ ಶೋಧ ನಡೆಸಿದೆ ಎಂದು ಅಧಿಕೃತ ಮೂಲಗಳನ್ನು ಉಲ್ಲೇಖಿಸಿ ಪಿಟಿಐ ವರದಿ ಮಾಡಿದೆ.

ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ)ಯ ನಿಬಂಧನೆಗಳ ಅಡಿಯಲ್ಲಿ ಕೇರಳ, ಕರ್ನಾಟಕ ಮತ್ತು ತಮಿಳುನಾಡಿನಾದ್ಯಂತ 21 ಸ್ಥಳಗಳಲ್ಲಿ ಶೋಧ ನಡೆಸಲಾಗುತ್ತಿದೆ.

ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ ಮತ್ತು ತಿರುವಾಂಕೂರು ದೇವಸ್ವಂ ಮಂಡಳಿ (ಟಿಡಿಬಿ) ಮಾಜಿ ಅಧ್ಯಕ್ಷ ಎ. ಪದ್ಮಕುಮಾರ್ ಅವರಿಗೆ ಸಂಬಂಧಿಸಿದ ಬೆಂಗಳೂರಿನಲ್ಲಿರುವ ಆಸ್ತಿಯನ್ನು ಕೇಂದ್ರ ತನಿಖಾ ಸಂಸ್ಥೆ ಶೋಧಿಸುತ್ತಿದೆ.

ಕೇರಳ ಪೊಲೀಸರ ಎಫ್‌ಐಆರ್ ಅನ್ನು ಗಮನದಲ್ಲಿಟ್ಟುಕೊಂಡು ಇಡಿ ಇತ್ತೀಚೆಗೆ ಪಿಎಂಎಲ್‌ಎ ಪ್ರಕರಣ ದಾಖಲಿಸಿತ್ತು.

ಈ ಪ್ರಕರಣವನ್ನು ಕೇರಳ ಹೈಕೋರ್ಟ್‌ನ ಮೇಲ್ವಿಚಾರಣೆಯಲ್ಲಿ ಕೇರಳ ಪೊಲೀಸ್ ವಿಶೇಷ ತನಿಖಾ ತಂಡ (ಎಸ್‌ಐಟಿ) ಕೂಡ ತನಿಖೆ ನಡೆಸುತ್ತಿದೆ.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಟ್ಯಾಲಿ ಪ್ರೈಮ್ 7.0 ಕುರಿತು ವಿಚಾರ ಸಂಕಿರಣ

# ಉದ್ಯಮಿಗಳು ಲೆಕ್ಕಪತ್ರವನ್ನು ಸರಿಯಾಗಿ ನಿರ್ವಹಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಆಧುನಿಕ ಜಗತ್ತಿನಲ್ಲಿ ತಂತ್ರಜ್ಞಾನ ಬೆಳದಂತೆ ನಮ್ಮ ವ್ಯಾಪಾರ ಮತ್ತು ಉದ್ಯಮ ಕ್ಷೇತ್ರದಲ್ಲಿ ಹೊಸತನವನ್ನು ಅಳವಡಿಸಿಕೊಳ್ಳುವುದು ಮುಖ್ಯವಾಗಿದೆ. ವ್ಯಾಪಾರೋದ್ಯಮ ಕ್ಷೇತ್ರದಲ್ಲಿ ಹೆಚ್ಚಿನ ಅಭಿವೃದ್ಧಿಯಾಗಬೇಕಾಗಿದೆ. ಜೊತೆಗೆ ನಮ್ಮ ಲೆಕ್ಕಪತ್ರವನ್ನು ಸರಿಯಾಗಿ ಇಟ್ಟುಕೊಳ್ಳುವುದು ಅಷ್ಟೇ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಹೊಸದಾಗಿ ಅಭಿವೃದ್ಧಿಗೊಂಡ ಟ್ಯಾಲಿ ಪ್ರೈಮ್ 7.0ನ್ನು ಪ್ರತಿಯೊಬ್ಬ ವ್ಯಾಪಾರಸ್ಥರು ಮತ್ತು ಕೈಗಾರಿಕೋದ್ಯಮಿಗಳು ಅಳವಡಿಸಿಕೊಂಡು ತಮ್ಮ ಲೆಕ್ಕಪತ್ರ, ಆದಾಯ ತೆರಿಗೆ ಮತ್ತು ವಾಣಿಜ್ಯ ತೆರಿಗೆ ಇಲಾಖೆಗಳಿಗೆ ಫೈಲಿಂಗ್‌ಗಳನ್ನು ಸುಲಭವಾಗಿ ನಿಭಾಯಿಸಬಹುದು ಎಂದು ರೂಪಾರಾಣಿ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಪುವಿ ಬೆಂಗಳೂರು ಹಾಗೂ ಅಂಕೌಂಟ್ ಪ್ರೋ ಸಲ್ಯೂಶನ್ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ ಟ್ಯಾಲಿ ಪ್ರೈಮ್ 7.0 ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ರೇಸ್ಟ್ ಆಫ್ ಕರ್ನಾಟಕ ಟ್ಯಾಲಿ ಸಲ್ಯೂಶನ್ ಬೆಂಗಳೂರು ಇದರ ರಿಜಿನಲ್ ಮ್ಯಾನೇಜರ್ ರಾಮನಗೌಡ ಜಿ.ಪಿ. ಹಾಗೂ ಟ್ಯಾಲಿ ಸಲ್ಯೂಶನ್ ಹುಬ್ಬಳ್ಳಿಯ ಜಯರಾಜ ಎಸ್ ಮಾತನಾಡುತ್ತಾ, ವ್ಯಾಪಾರಸ್ಥರು ತಮ್ಮ ಲೆಕ್ಕಪತ್ರವನ್ನು ಸರಿಯಾಗಿ ನಿಭಾಯಿಸಲು ಈ ಟ್ಯಾಲಿ ಪ್ರೈಮ್ ಅನುಕೂಲವಾಗುತ್ತದೆ ಎಂದು ಮಾಹಿತಿ ನೀಡಿದರು.

ಮಹಿಳಾ ಘಟಕದ ಅಧ್ಯಕ್ಷರಾದ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ವ್ಯಾಪಾರ-ವ್ಯವಹಾರವನ್ನು ಎಷ್ಟು ಅಚ್ಚುಕಟ್ಟಾಗಿ ನಿಭಾಯಿಸುತ್ತೇವೆಯೋ ಅಷ್ಟೇ ಲೆಕ್ಕಪತ್ರ ಇಡುವುದು ಮುಖ್ಯವಾಗಿದೆ. ಹೊಸ ಹೊಸ ತಂತ್ರಜ್ಞಾನ ಬೆಳೆದಂತೆ ನಾವು ಅವುಗಳನ್ನು ಅಳವಡಿಸಿಕೊಂಡು ವ್ಯಾಪಾರೋದ್ಯಮವನ್ನು ಅಭಿವೃದ್ಧಿಪಡಿಸಿಕೊಳ್ಳಬೇಕೆಂದರು.

ಪದ್ಮಾ ಕಬಾಡಿ ಪ್ರಾರ್ಥಿಸಿದರು. ಸಂಸ್ಥೆಯ ಮಹಿಳಾ ಘಟಕದ ಗೌರವ ಕಾರ್ಯದರ್ಶಿ ಪೂರ್ಣಿಮಾ ಕೆ.ಆಟದ ಕಾರ್ಯಕ್ರಮ ನಿರೂಪಿಸಿದರು. ಮಹಿಳಾ ಘಟಕದ ಕೋಶಾಧ್ಯಕ್ಷರಾದ ರೇಣುಕಾ ಲಿಂಗರಾಜ ಅಮಾತ್ಯ ವಂದಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ ಮಾತನಾಡುತ್ತಾ, ವ್ಯಾಪಾರ ಮಾಡಿದರೆ ಸಾಲದು, ಲೆಕ್ಕಪತ್ರವನ್ನು ಇಡುವುದು ಅತೀ ಅವಶ್ಯಕವಾಗಿದೆ. ಕೊಟ್ಟಿಗಟ್ಟಲೇ ವ್ಯಾಪಾರ ಮಾಡುತ್ತೇವೆ. ಆದರೆ ಲೆಕ್ಕಪತ್ರವನ್ನು ನಿಭಾಯಿಸುವುದು ಅತೀ ಮುಖ್ಯವಾಗಿದೆ ಎಂದು ತಿಳಿಸಿದರು.

# ಮಹಾಯೋಗಿ ವೇಮನರ ಚಿಂತನೆಗಳು ದಾರಿದೀಪವಾಗಲಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಯೋಗಿ ವೇಮನರು ರಾಜವಂಶ ಸಂಜಾತರಾಗಿ, ಕವಿಯಾಗಿ ಸಮಾಜದ ಅಂಕು-ಡೊಂಕುಗಳನ್ನು ತಿದ್ದುವ ಸಮಾಜ ಸುಧಾರಕರಾಗಿ, ಜನರಾಡುವ ಭಾಷೆಯಲ್ಲಿ ಬೋಧೆ ಮಾಡಿದ ಜನಪರ ನಿಲುವಿನ ರಾಜಯೋಗಿ. ಇವರ ಚಿಂತನೆಗಳು ಯುಗಯುಗಾಂತರಕ್ಕೂ ದಾರಿದೀಪವಾಗಿವೆ ಎಂದು ಬೆಳ್ಳಟ್ಟಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ತಿಮ್ಮರಡ್ಡಿ ಮರಡ್ಡಿ ಹೇಳಿದರು.

ಅವರು ಸೋಮವಾರ ಬೆಳ್ಳಟ್ಟಿಯ ಶ್ರೀ ಹೇಮರಡ್ಡಿ ಮಲ್ಲಮ್ಮನವರ ದೇವಸ್ಥಾನದಲ್ಲಿ ಮಹಾಕವಿ ಶ್ರೀ ಯೋಗಿವೇಮನರ 614ನೇ ಜಯಂತಿ ಆಚರಣೆ ಅಂಗವಾಗಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಯೋಗಿ ವೇಮನರು ಸತ್ಯದ ಸಾಕ್ಷಾತ್ಕಾರ ಹೊಂದಿ ಲೋಕಕ್ಕೆ ಬೆಳಕಾದವರು. ಸಮಾಜ ಸುಧಾರಕರಾಗಿ, ಕ್ರಾಂತಿಕಾರಿಯಾಗಿ ನೀಡಿದ ಕೊಡುಗೆ ಅಪಾರವಾಗಿದೆ. ಇವರ ತತ್ವ, ಆದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸಿ ಸನ್ಮಾರ್ಗದಲ್ಲಿ ನಡೆಯುವುದು ಅವಶ್ಯ ಎಂದರು. ಹನಮರಡ್ಡಿ ಭರಮರಡ್ಡಿ, ವಾಸರಡ್ಡಿ ಬಸವರಡ್ಡಿ, ನಾಗರರಡ್ಡಿ ಅಳವಂಡಿ, ನಿಂಗರಡ್ಡಿ ಹೊಸಮನಿ, ಜನಾರ್ಧನ ಶೇಷನಗೌಡ್ರ, ಪಾಂಡುರಡ್ಡಿ ಗೋವಣ್ಣನವರ, ಸಹದೇವರಡ್ಡಿ ಬಸವರಡ್ಡಿ, ವೆಂಕಟೇಶ ಬಸವರಡ್ಡಿ, ಹಣಮರಡ್ಡಿ ಮರಡ್ಡಿ, ವಿಜಯರಡ್ಡಿ ಮೇಕಳಿ, ಶೇಷರಡ್ಡಿ ಅಳವಂಡಿ, ಬಸವರಡ್ಡಿ ಮಾದನೂರ, ಕೃಷ್ಣರಡ್ಡಿ ದುರ್ಗದ, ವೆಂಕಟೇಶ ಹ್ಯಾಟಿ, ರಾಘವೇಂದ್ರ ಅಳವಂಡಿ, ಶ್ರೀನಿವಾಸರಡ್ಡಿ ಮರಡ್ಡಿ, ತಿಮ್ಮರಡ್ಡಿ ಮೇಕಳಿ, ಸೋಮರಡ್ಡಿ ಮರಡ್ಡಿ, ಫಕ್ಕೀರಡ್ಡಿ ಶಿಡಗನಾಳ, ಪ್ರಮೋದ ಮೇಕಳಿ ಉಪಸ್ಥಿತರಿದ್ದರು.

## ವಿಧಾನಸಭೆ ಭಾಷಣದಲ್ಲಿ ಕೇಂದ್ರ ಸರ್ಕಾರವನ್ನು ಟೀಕಿಸುವ ಸಾಲುಗಳು ಕೈಬಿಟ್ಟ ಕೇರಳ ರಾಜ್ಯಪಾಲ : ಸಿಎಂ ಪಿಣರಾಯಿ ವಿಜಯನ್ ಆರೋಪ

■ ವಿಜಯಸಾಕ್ಷಿ ಸುದ್ದಿ, ಕೇರಳ

ತಮಿಳುನಾಡಿನ ಬಳಿಕ ಕೇರಳ ವಿಧಾನಸಭೆಯಲ್ಲೂ ಸರ್ಕಾರ ಮತ್ತು ರಾಜ್ಯಪಾಲರ ನಡುವೆ ಮಂಗಳವಾರ (ಜ.20) ಜಟಾಪಟಿ ನಡೆದಿದೆ. ಸರ್ಕಾರ ಸಿದ್ದಪಡಿಸಿಕೊಟ್ಟ ಭಾಷಣದಲ್ಲಿನ ಕೇಂದ್ರ ಸರ್ಕಾರವನ್ನು ಟೀಕಿಸುವ ಕೆಲ ಸಾಲುಗಳನ್ನು ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರು ಉದ್ದೇಶಪೂರ್ವಕವಾಗಿ ಓದದೆ ಬಿಟ್ಟಿದ್ದಾರೆ. ಇನ್ನೂ ಕೆಲ ಸಾಲುಗಳನ್ನು ಮಾರ್ಪಡಿಸಿದ್ದಾರೆ ಎಂದು ಸಿಎಂ ಪಿಣರಾಯಿ ವಿಜಯನ್ ಆರೋಪಿಸಿದ್ದಾರೆ.

112 ನಿಮಿಷಗಳ ಸುದೀರ್ಘ ಭಾಷಣ ಮಾಡಿ ರಾಜ್ಯಪಾಲರು ನಿರ್ಗಮಿಸಿದ ನಂತರ ಮಾತನಾಡಿದ ಮುಖ್ಯಮಂತ್ರಿ, ಸಚಿವ ಸಂಪುಟ ಅನುಮೋದಿಸಿದ ಭಾಷಣದಲ್ಲಿನ ಕೆಲವು ಸಾಲುಗಳನ್ನು ರಾಜ್ಯಪಾಲರು ಕೈಬಿಟ್ಟಿದ್ದಾರೆ ಅಥವಾ ಬದಲಾಯಿಸಿದ್ದಾರೆ ಎಂದು ಆರೋಪಿಸಿದ್ದಾರೆ. ಮಂತ್ರಿ ಮಂಡಲ ಅನುಮೋದಿಸಿದ ಅಧಿಕೃತ ನೀತಿ ಭಾಷಣವು ಹಾಗೆಯೇ ಉಳಿಯಬೇಕು ಎಂದು ಒತ್ತಿ ಹೇಳಿದ್ದಾರೆ.

ಒಕ್ಕೂಟ ವ್ಯವಸ್ಥೆಯ ತತ್ವಗಳಿಗೆ ವಿರುದ್ಧವಾಗಿ ಕೇಂದ್ರ ಸರ್ಕಾರವು ರಾಜ್ಯದ ಮೇಲೆ ಆರ್ಥಿಕ ಒತ್ತಡ ಹೇರುತ್ತಿದೆ ಎಂದು ಹೇಳಲಾಗಿದ್ದ ಭಾಷಣದ 12ನೇ ಪ್ಯಾರಾವನ್ನು ರಾಜ್ಯಪಾಲರು ಓದಿಲ್ಲ. ರಾಜ್ಯ ಸರ್ಕಾರ ಅಂಗೀಕರಿಸಿದ ಮಸೂದೆಗಳನ್ನು ರಾಜ್ಯಪಾಲರು ದೀರ್ಘಕಾಲ ತಡೆಹಿಡಿದಿರುವ ಬಗ್ಗೆ ಮತ್ತು ಈ ವಿಷಯದಲ್ಲಿ ಸರ್ಕಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿರುವ ಕುರಿತಾದ 15ನೇ ಪ್ಯಾರಾವನ್ನು ಕೈಬಿಟ್ಟಿದ್ದಾರೆ ಮತ್ತು ತೆರಿಗೆ ಹಂಚಿಕೆಗೆ ಸಂಬಂಧಿಸಿದ ಭಾಗದಲ್ಲಿ "ಇದು ನನ್ನ ಸರ್ಕಾರದ ನಂಬಿಕೆ" ಎಂಬ ಸಾಲನ್ನು ರಾಜ್ಯಪಾಲರು ಸ್ವತಃ ಸೇರಿಸಿ ಓದಿದ್ದಾರೆ ಎಂದು ಸಿಎಂ ಆರೋಪ ಮಾಡಿದ್ದಾರೆ.

ರಾಜ್ಯಪಾಲರು ತೆರಳಿದ ನಂತರ, ಸಿಎಂ ಪಿಣರಾಯಿ ವಿಜಯನ್ ಅವರು ರಾಜ್ಯಪಾಲರು ಕೈಬಿಟ್ಟ ಭಾಗಗಳನ್ನು ಸದನದಲ್ಲಿ ಓದಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಂವಿಧಾನದ ವಿಧಿ 176ರ ಪ್ರಕಾರ, ರಾಜ್ಯ ಸಚಿವ ಸಂಪುಟ ಅನುಮೋದಿಸಿದ ಭಾಷಣವನ್ನು ರಾಜ್ಯಪಾಲರು ಹಾಗೆಯೇ ಓದಬೇಕು ಎಂದು ಸಿಎಂ ಪ್ರತಿಪಾದಿಸಿದ್ದಾರೆ.

"ಮುಖ್ಯಮಂತ್ರಿ ಸೂಚಿಸಿರುವ ವಿಷಯವು ಬಹಳ ನಿರ್ಣಾಯಕವಾಗಿದೆ. ಸಂಪುಟ ಅನುಮೋದಿಸಿರುವ ವಿಷಯದಲ್ಲಿ ಬದಲಾವಣೆ ಮಾಡುವುದು ಮತ್ತು ಕೈಬಿಡುವುದು ಸಂಪ್ರದಾಯಕ್ಕೆ ವಿರುದ್ಧವಾಗಿದೆ. ಸಂಪುಟ ಅನುಮೋದಿತ ಭಾಷಣವನ್ನೇ ಸದನದ ಸದಸ್ಯರು ಮತ್ತು ಮಾಧ್ಯಮಗಳಿಗೆ ನೀಡಲಾಗುತ್ತದೆ" ಎಂದು ಹೇಳುವ ಮೂಲಕ ಸ್ಪೀಕರ್ ಎ.ಎನ್. ಶಂಸೀರ್ ಮುಖ್ಯಮಂತ್ರಿಯ ಮಾತನ್ನು ಬೆಂಬಲಿಸಿದ್ದಾರೆ.

"ಈ ರೀತಿಯ ಸಂದರ್ಭಗಳಲ್ಲಿ ರಾಜ್ಯಪಾಲರನ್ನು ಅವಮಾನಿಸುವ ರೀತಿಯೇ ತಮಿಳುನಾಡು ಮತ್ತು ಕೇರಳದಲ್ಲೂ ನಡೆಯುತ್ತಿದೆ" ಎಂದು ಗೋವಾ ಮಾಜಿ ರಾಜ್ಯಪಾಲ ಮತ್ತು ಹಿರಿಯ ಬಿಜೆಪಿ ನಾಯಕ ಪಿ.ಎಸ್. ಶ್ರೀಧರನ್ ಪಿಳ್ಳೈ ಈ ಘಟನೆಯ ಬಗ್ಗೆ ಪ್ರತಿಕ್ರಿಯಿಸಿದ್ದಾರೆ.

ಈ ಘಟನೆಯು ಕೇಂದ್ರ-ರಾಜ್ಯ ಸಂಬಂಧಗಳು, ರಾಜ್ಯಪಾಲರ ಸಾಂವಿಧಾನಿಕ ಪಾತ್ರ ಮತ್ತು ಶಾಸಕಾಂಗ ಸಂಪ್ರದಾಯಗಳ ಕುರಿತು ಚರ್ಚೆಯನ್ನು ಹುಟ್ಟುಹಾಕಿದೆ.



## ನಿತಿನ್ ನಬಿನ್ ನನ್ನ ಬಾಸ್, ನಾನು ಕೆಲಸಗಾರ ; ಬಿಜೆಪಿ ನೂತನ ಮುಖ್ಯಸ್ಥರನ್ನು ಸ್ವಾಗತಿಸಿದ ಪ್ರಧಾನಿ ಮೋದಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಅತ್ಯಂತ ಕಿರಿಯ ವಯಸ್ಸಿನ ನಿತಿನ್ ನಬಿನ್ ಅವರನ್ನು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದರು. ಪಕ್ಷದ ಪರಂಪರೆಯನ್ನು ಮುಂದುವರಿಸುವ 'ಸಹಸ್ರಮಾನದ' ವ್ಯಕ್ತಿ ಎಂದು ಕರೆದರು.

"ಪಕ್ಷದ ವಿಷಯಕ್ಕೆ ಬಂದರೆ, ನಿತಿನ್ ನಬಿನ್ ಬಾಸ್, ನಾನು ಪಕ್ಷದ ಕಾರ್ಯಕರ್ತ" ಎಂದು ಪ್ರಧಾನಿ ಬಿಜೆಪಿ ಕಾರ್ಯಕರ್ತರಿಗೆ ತಿಳಿಸಿದರು.

ತಮಗೆ ನಿಯೋಜಿಸಲಾದ ಎಲ್ಲಾ ಕೆಲಸಗಳನ್ನು ಪೂರ್ಣ ಜವಾಬ್ದಾರಿಯೊಂದಿಗೆ ಯಶಸ್ವಿಯಾಗಿ ಪೂರೈಸಿದ್ದಕ್ಕಾಗಿ ಪ್ರಧಾನಿ ನಬಿನ್ ಅವರನ್ನು ಶ್ಲಾಘಿಸಿದರು.

"ಇಂದಿನ ಯುವಕರ ಭಾಷೆಯಲ್ಲಿ ಹೇಳುವುದಾದರೆ, ನಿತಿನ್ ಅವರು ಸ್ವತಃ ಒಂದು ರೀತಿಯಲ್ಲಿ ಸಹಸ್ರಮಾನದವರು. ಅವರು ಭಾರತದಲ್ಲಿ ಪ್ರಮುಖ ಆರ್ಥಿಕ, ಸಾಮಾಜಿಕ ಮತ್ತು ತಾಂತ್ರಿಕ ಪರಿವರ್ತನೆಗಳನ್ನು ಕಂಡ ಪೀಳಿಗೆಗೆ ಸೇರಿದವರು. ಅವರು ತಮ್ಮ ಬಾಲ್ಯದಲ್ಲಿ ರೇಡಿಯೊದಿಂದ ಮಾಹಿತಿಯನ್ನು ಪಡೆದ ಪೀಳಿಗೆಗೆ ಸೇರಿದವರು. ಈಗ ಎಐನ ಸಕ್ರಿಯ ಬಳಕೆದಾರರಾಗಿದ್ದಾರೆ. ನಿತಿನ್ ಯುವ ಶಕ್ತಿ ಮತ್ತು ಸಾಂಸ್ಥಿಕ ಕೆಲಸದಲ್ಲಿ ವ್ಯಾಪಕ ಅನುಭವ ಎರಡನ್ನೂ ಹೊಂದಿದ್ದಾರೆ. ಇದು ನಮ್ಮ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರಿಗೂ ಬಹಳ ಪ್ರಯೋಜನಕಾರಿಯಾಗಿದೆ" ಎಂದು ಪ್ರಧಾನಿ ಮೋದಿ ಹೇಳಿದರು.

ಬಿಜೆಪಿ ಮುಖ್ಯಸ್ಥರ ಜವಾಬ್ದಾರಿ ಪಕ್ಷಕ್ಕೆ ಮಾತ್ರ ಸೀಮಿತವಾಗಿಲ್ಲ. ಅವರು ಎನ್‌ಡಿಎ ಕೂಟದೊಳಗೆ ಸಮನ್ವಯವನ್ನು ಖಚಿತಪಡಿಸಿಕೊಳ್ಳುವ ಜವಾಬ್ದಾರಿಯೂ ಇದೆ ಎಂದು ಪ್ರಧಾನಿ ಹೇಳಿದರು. ಪಕ್ಷವನ್ನು ಸಂಸ್ಕೃತಿ ಮತ್ತು ಕುಟುಂಬ ಎಂದು ಕರೆದ ಪ್ರಧಾನಿ ಮೋದಿ, ಬಿಜೆಪಿ ಹೊಸಬರಿಗೆ ವೇದಿಕೆಯನ್ನು ಒದಗಿಸುತ್ತದೆ ಎಂದು ಹೇಳಿದರು.

"ಬಿಜೆಪಿ ಒಂದು ಸಂಸ್ಕೃತಿ. ಬಿಜೆಪಿ ಒಂದು ಕುಟುಂಬ. ಇಲ್ಲಿ, ನಮಗೆ ಕೇವಲ ಸದಸ್ಯತ್ವಕ್ಕಿಂತ ಹೆಚ್ಚಿನ ಸಂಬಂಧಗಳಿವೆ. ಬಿಜೆಪಿ ಒಂದು ಸಂಪ್ರದಾಯವಾಗಿದ್ದು, ಅದು ಸ್ಥಾನದಿಂದಲ್ಲ, ಪ್ರಕ್ರಿಯೆಯಿಂದ ನಡೆಸಲ್ಪಡುತ್ತದೆ. ನಮ್ಮ ಅಧ್ಯಕ್ಷರು ಬದಲಾಗುತ್ತಾರೆ. ಆದರೆ ನಮ್ಮ ಆದರ್ಶಗಳು ಬದಲಾಗುವುದಿಲ್ಲ. ನಾಯಕತ್ವ ಬದಲಾಗುತ್ತದೆ, ಆದರೆ ದಿಕ್ಕು ಒಂದೇ ಆಗಿರುತ್ತದೆ. ನಮ್ಮ ಸಂಪರ್ಕವು ಸ್ಥಳೀಯವಾಗಿರುವುದರಿಂದ ಬಿಜೆಪಿಯ ಚೈತನ್ಯ ರಾಷ್ಟ್ರೀಯವಾಗಿದೆ. ನಮ್ಮ ಬೇರುಗಳು ಮಣ್ಣಿನಲ್ಲಿ ಆಳವಾಗಿ ಹರಡಿವೆ. ಅದಕ್ಕಾಗಿಯೇ ಬಿಜೆಪಿ ಪ್ರಾದೇಶಿಕ ಆಕಾಂಕ್ಷೆಗಳಿಗೆ ವೇದಿಕೆಯನ್ನು ಒದಗಿಸುತ್ತದೆ. ಇದು ಅವುಗಳನ್ನು ರಾಷ್ಟ್ರೀಯ ಮಹತ್ವಾಕಾಂಕ್ಷೆಗಳಿಗೆ ಅಡಿಪಾಯವಾಗಿಸುತ್ತದೆ. ಅದಕ್ಕಾಗಿಯೇ ಇಂದು ದೇಶದ ಮೂಲೆ ಮೂಲೆಯ ಜನರು ಬಿಜೆಪಿಯೊಂದಿಗೆ ಇದ್ದಾರೆ, ಬಿಜೆಪಿಗೆ ಸೇರುತ್ತಿದ್ದಾರೆ. ಅಷ್ಟೇ ಅಲ್ಲ, ತಮ್ಮ ರಾಜಕೀಯ ಪ್ರಯಾಣವನ್ನು ಪ್ರಾರಂಭಿಸಲು ಬಯಸುವ ಯಾರಾದರೂ ಬಿಜೆಪಿಯ ಪ್ರವೇಶ ಬಿಂದುವನ್ನು ಅತ್ಯುತ್ತಮ ಮತ್ತು ಸುರಕ್ಷಿತ ಆಯ್ಕೆಯೆಂದು ಕಂಡುಕೊಳ್ಳುತ್ತಾರೆ" ಎಂದು ಅವರು ಹೇಳಿದರು.



# ಇಂದು ಅಂಬಿಗರ ಚೌಡಯ್ಯ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಜನವರಿ 21 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನ ಆಡಿಟೋರಿಯಂ ಹಾಲ್‌ನಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಶಿವರಾಜ. ಎಸ್.ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ , ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ, ಆಗಮಿಸಲಿದ್ದಾರೆ. ಶಿವಾನಂದ ಗೋಗೇರಿ ಅವರು ಉಪನ್ಯಾಸ ನೀಡುವರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ದಂಡಾಧಿಕಾರಿ ಡಾ.ದುರಗೇಶ ಕೆ.ಆರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವ್ಹಿ.ಬಳ್ಳಾರಿ ಸ್ವಾಗತ ಕೋರಿದ್ದಾರೆ.

## ಬಾಲಕರ ವಸತಿ ನಿಲಯದ ನೂತನ ಕಟ್ಟಡ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಹಾಕಿ ಕ್ರೀಡಾಂಗಣ ಹತ್ತಿರವಿರುವ ಗಾಂಧಿನಗರ (ಸೆಟ್ಲಮೆಂಟ್)ದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಲೋಕೋಪಯೋಗಿ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಅನುದಾನದಡಿಯಲ್ಲಿ ಅಂದಾಜು 650 ಲಕ್ಷ ಮೊತ್ತಗಳಲ್ಲಿ ನಿರ್ಮಿಸಲಾದ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ನೂತನ ಕಟ್ಟಡವನ್ನು ಸಚಿವರಾದ ಎಚ್.ಕೆ.ಪಾಟೀಲ ಮತ್ತು ಬಿ.ಝಡ್. ಜಮೀರ ಅಹ್ಮದ್ ಖಾನ್ ಜಂಟಿಯಾಗಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಎಸ್.ಎನ್.ಬಳ್ಳಾರಿ, ಅಶೋಕ ಮಂದಾಲಿ, ಪಾರುಕ್ ಹುಬ್ಬಳ್ಳಿ, ಎ.ಎಂ. ಹಿಂಡಸಗೇರಿ, ಬಸವರಾಜ್, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಲೋಕೋಪಯೋಗಿ ಕಾರ್ಯನಿರ್ವಾಹಕ ಇಂಜಿನಿಯರ್ ಉಮೇಶ ಎಸ್, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ ಡಾ.ನಂದಾ ಹನಬರಟ್ಟಿ ಸೇರಿದಂತೆ ಇತರರು ಇದ್ದರು.

ಮಹಾಯೋಗಿ ಶ್ರೀ ವೇಮನ ಜಯಂತಿ ಕಾರ್ಯಕ್ರಮ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ವೇಮನರ ಚಿಂತನೆಗಳು ಇಂದಿಗೂ ಪ್ರಸ್ತುತ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಹಾಯೋಗಿ ವೇಮನರ ಜೀವನ, ತತ್ವ, ಚಿಂತನೆ ಮತ್ತು ಸಾಧನೆಯನ್ನು ಜಗತ್ತಿಗೆ ಪರಿಚಯಿಸುವ ಮಹತ್ವದ ಜವಾಬ್ದಾರಿಯನ್ನು ನಿರ್ವಹಿಸಬೇಕಿದೆ. ಕರ್ನಾಟಕ ವಿಶ್ವವಿದ್ಯಾಲಯದ ವೇಮನ ಪೀಠದವರು ಈ ಕಾರ್ಯವನ್ನು ಮಾಡುತ್ತಿದ್ದು, ಸದ್ವಿಚಾರಗಳನ್ನು ಜಗತ್ತಿಗೆ ಪರಿಚಯಿಸುವ ಕಾರ್ಯದಲ್ಲಿ ನಾವೆಲ್ಲರೂ ಕೈಜೋಡಿಸುವ ಅಗತ್ಯವಿದೆ ಎಂದು ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ. ಪಾಟೀಲ ತಿಳಿಸಿದರು.

ಅವರು ಸೋಮವಾರ ಸಂಜೆ ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ್ದ




ಮಹಾಯೋಗಿ ಶ್ರೀ ವೇಮನ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವೇಮನರು ಸಾರಿದ ಸಾಮಾಜಿಕ ಸಮಾನತೆ, ಮಾನವೀಯ ಮೌಲ್ಯಗಳು ಹಾಗೂ ವೈಚಾರಿಕ ಚಿಂತನೆಗಳು ಇಂದಿನ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿದ್ದು, ಅವುಗಳನ್ನು ಅಧ್ಯಯನ, ಸಂಶೋಧನೆ ಮತ್ತು ಜನಪ್ರಿಯಗೊಳಿಸುವ ಕಾರ್ಯವನ್ನು ಪರಿಣಾಮಕಾರಿಯಾಗಿ ಕೈಗೊಳ್ಳಬೇಕು ಎಂದು ಹೇಳಿದರು.

ವೇಮನ ಸಾಹಿತ್ಯದ ಸೃಷ್ಟಿ ಹಾಗೂ ಅದರ ವ್ಯಾಪಕ ಪ್ರಚಾರ ಕಾರ್ಯಗಳು ಪರಿಣಾಮಕಾರಿಯಾಗಿ ನಡೆಯಬೇಕು.

ಕರ್ನಾಟಕ ವಿಶ್ವವಿದ್ಯಾಲಯದ ವೇಮನ ಅಧ್ಯಯನ ಪೀಠದ ವತಿಯಿಂದ ಈಗಾಗಲೇ 15 ಪುಸ್ತಕಗಳನ್ನು ಪ್ರಕಟಿಸಲಾಗಿದ್ದು, ಮುಂದಿನ ಎರಡು ವರ್ಷಗಳಲ್ಲಿ ಒಟ್ಟು 40 ಪುಸ್ತಕಗಳನ್ನು ಪ್ರಕಟಿಸುವ ಮೂಲಕ ಸಾರಸ್ವತ ಲೋಕಕ್ಕೆ ಮಹತ್ವದ ಕೊಡುಗೆ ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾಯೋಗಿ ವೇಮನ ಅಧ್ಯಯನ ಪೀಠದ ವತಿಯಿಂದ ಪ್ರಕಟಿಸಲಾದ 10 ಪುಸ್ತಕಗಳನ್ನು ಗಣ್ಯರು ಬಿಡುಗಡೆ ಮಾಡಿದರು.

ಮಹಾಯೋಗಿ ವೇಮನ ಅವರ ಜೀವನ ಚರಿತ್ರೆಯನ್ನು ಆಧರಿಸಿದ ಸಿನಿಮಾವನ್ನು ಸಾರ್ವಜನಿಕರಿಗೆ ಪ್ರದರ್ಶಿಸುವ ಮೂಲಕ ಅವರ ಜೀವನ ಮೌಲ್ಯಗಳನ್ನು ಎಲ್ಲ ವರ್ಗದ ಜನರಿಗೆ ತಲುಪಿಸುವ ಕಾರ್ಯವೂ ಅಗತ್ಯವಿದೆ. ವೇಮನ ಅವರು ಸಾರಿದ ವೈಚಾರಿಕತೆ, ಸಾಮಾಜಿಕ ನ್ಯಾಯ ಮತ್ತು ಮಾನವೀಯ ಮೌಲ್ಯಗಳು ಸಾಮಾನ್ಯ ಜನರ ತನಕ ತಲುಪಿದಾಗ ಮಾತ್ರ ಈ ಪ್ರಯತ್ನಕ್ಕೆ ಅರ್ಥ ಬರುತ್ತದೆ. ಆದ್ದರಿಂದ ವೇಮನ ಅವರ ವಿಚಾರಗಳು ವ್ಯಾಪಕವಾಗಿ ಜನಮನಕ್ಕೆ ತಲುಪುವಂತೆ ಕ್ರಮವಹಿಸಬೇಕು ಎಂದು ಸಚಿವ ಎಚ್.ಕೆ ಪಾಟೀಲ ಹೇಳಿದರು.

ಕಾರ್ಯಕ್ರಮದಲ್ಲಿ ಬಸವರಡ್ಡಿ ಸಮೂಹ ಶಿಕ್ಷಣ ಸಂಸ್ಥೆಯ ಪ್ರಾಚಾರ್ಯೆ ಶಶಿಕಲಾ ಶಂಕರ ಬಸವರಡ್ಡಿ ಮಹಾಯೋಗಿ ವೇಮನರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ ಡಾ. ಶಂಕರ ವನಕ್ಯಾಳ, ನ್ಯಾಯವಾದಿಗಳಾದ ವ್ಹಿ.ಡಿ. ಕಾಮರಡ್ಡಿ, ಕೆ.ಎಲ್. ಪಾಟೀಲ, ನಿವೃತ್ತ ಅಧೀಕ್ಷಕ ಅಭಿಯಂತರ ರಮೇಶ ಜಂಗಲ್, ಶ್ರೀ ವೆಂಕಟೇಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷ ಡಾ. ಅಜ್ಜಣ್ಣ ಅಳಗವಾಡಿ, ಹಿರಿಯರಾದ ರಾಯರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು. ಮಹಾಯೋಗಿ ವೇಮನ ಪೀಠದ ಸಂಯೋಜಕ ಡಾ. ಎಚ್.ಬಿ. ನೀಲಗುಂದ ಪ್ರಾಸ್ತಾವಿಕವಾಗಿ ಮಾತನಾಡಿದರು.

## ಪ್ರತಿಯೊಬ್ಬರಲ್ಲೂ ಗಾಂಧೀಜಿ ಇದ್ದಾರೆ

▶▶ ಮೊದಲನೇ ಪುಟದಿಂದ

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಕಡ್ಲಿಕೊಪ್ಪ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗದಗ-ಬೆಟಗೇರಿ ನಗರಸಭೆಯ ಸದಸ್ಯರಾದ ಮೆಹಬೂಬಸಾಬ ಡಿ.ನದಾಫ್, ಜಿಲ್ಲೆಯ ಹಿರಿಯ ಸಾಂಸ್ಕೃತಿಕ ಚಿಂತಕರಾದ ಡಾ. ಜಿ.ಬಿ. ಪಾಟೀಲ, ರಾಜ್ಯ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ರವಿ ಎಲ್. ಗುಂಜೀಕರ್, ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯ ಅಧ್ಯಕ್ಷರಾದ ಮೌನೇಶ ಸಿ.ಬಡಿಗೇರ(ನರೇಗಲ್ಲ) ಮತ್ತು ಶಿವಮೊಗ್ಗ ರಂಗಾಯಣ ತಂಡದ ಶಂಕರ್ ಉಪಸ್ಥಿತರಿದ್ದರು.

ಮೌನೇಶ ಸಿ. ಬಡಿಗೇರ(ನರೇಗಲ್ಲ) ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಅಧ್ಯಾಪಕ ವಿಶ್ವನಾಥ ಯ.ಕಮ್ಮಾರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ, ಪ್ರೊ. ಸಿದ್ದು ಯಾಪಲಪರುವಿ, ಅಂದಾನೆಪ್ಪ ವಿಭೂತಿ, ರುದ್ರಣ್ಣಾ ಗುಳಗುಳಿ, ಡಾ. ದತ್ತಪ್ರಸನ್ನ ಲ.ಪಾಟೀಲ, ಸಿ.ವಿ. ಬಡಿಗೇರ, ವಿಶ್ವನಾಥ ಬೇಂದ್ರೆ, ಶ್ರೀನಿವಾಸ ಗುಂಜಾಳ, ಕೃಷ್ಣ ಕಡ್ಲಿಕೊಪ್ಪ, ಬಸವರಾಜ ಬಡಿಗೇರ, ಶ್ರೀಧರ ಕೊಣ್ಣೂರ, ಮಧುಸೂದನ ವಿಶ್ವಕರ್ಮ ಮುಂತಾದವರಿದ್ದರು.

## ಅಪರ ಜಿಲ್ಲಾಧಿಕಾರಿಗಳಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

16ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಚುನಾವಣಾ ಕಾರ್ಯದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ್ದಕ್ಕಾಗಿ ಬೆಳಗಾವಿ ವಿಭಾಗ ಮಟ್ಟದಲ್ಲಿ ಗದಗ ಜಿಲ್ಲೆಯ ಅಪರ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಡಾ. ದುರಗೇಶ್ ಕೆ.ಆರ್ ಅವರು ರಾಜ್ಯ ಮಟ್ಟದ ಪ್ರಶಸ್ತಿಗೆ ಪಾತ್ರರಾಗಿದ್ದಾರೆ.

ಈ ಹಿನ್ನೆಲೆಯಲ್ಲಿ ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಉತ್ತಮ ಸಹಾಯಕ



ಚುನಾವಣಾಧಿಕಾರಿ ಕರ್ತವ್ಯ ನಿರ್ವಹಣೆಗೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಅವರನ್ನು ರಾಜ್ಯ ಸರ್ಕಾರಿ ನೌಕರರ ಗದಗ ಜಿಲ್ಲಾ ಸಂಘದಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಪದಾಧಿಕಾರಿಗಳಾದ ರಾಜು ಸೊಪಡ್ಲ, ರಾಜು ಕಂತಿಗೊಣ್ಣವರ, ಶ್ರೀಧರ ಚಿನಗುಡಿ, ವಾರ್ತಾಧಿಕಾರಿ ವಸಂತ ಮಡ್ಲೂರ ಮುಂತಾದವರಿದ್ದರು.

## ನೋಂದಾಯಿತ ಲೇವಾದೇವಿ/ಗಿರವಿ /ಹಣಕಾಸು ಸಂಸ್ಥೆಗಳ ಲೈಸನ್ಸ್ ನವೀಕರಣ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ನೋಂದಾಯಿತ ಲೇವಾ ದೇವಿಗಾರರ / ಗಿರವಿದಾರರು ಮತ್ತು ಹಣಕಾಸು ಸಂಸ್ಥೆಯವರಿಗೆ ತಿಳಿಸುವುದೇನೆಂದರೆ ದಿ. 31-03-2026 ರಂದು ಮುಕ್ತಾಂಯಗೊಳ್ಳಲಿರುವ ಲೇವಾದೇವಿ/ಗಿರವಿ ಲೈಸನ್ಸ್‌ನ್ನು ಜನವರಿ 31 ರ ಒಳಗಾಗಿ ರೂ.5000=00 ಗಳ ಮೊತ್ತದ ನವೀಕರಣ ಚಲನ್ನು (ಗಿರವಿ ಲೈಸನ್ಸ್ ಇದ್ದಲ್ಲಿ ಹೆಚ್ಚುವರಿಯಾಗಿ ರೂ.5000=00 ಗಳನ್ನು) ಸರ್ಕಾರಿ ಖಜಾನೆಗೆ ಸರ್ಕಾರಿ ಚಲನ್‌ಗಳ ಮೂಲಕ ಭರಣ ಮಾಡಲು ತಿಳಿಸಲಾಗಿದೆ. ಚಲನ್‌ಗಳನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯಿಂದಲೂ ಸಹ ಪಡೆಯಬಹುದಾಗಿದೆ.

ಈ ಬಗ್ಗೆ ಈ ಕಚೇರಿಯಿಂದ ನೋಟಿಸನ್ನು ಎಲ್ಲಾ ನೋಂದಾಯಿತ ಲೇವಾದೇವಿಗಾರರು/ಗಿರವಿದಾರರು /ಹಣಕಾಸು ಸಂಸ್ಥೆಯವರಿಗೆ ಅಂಚೆ ಮೂಲಕ ಈಗಾಗಲೇ ಕಳುಹಿಸಿದೆ. ಒಂದು ವೇಳೆ ಸದರಿ ನೋಟಿಸುಗಳು ತಲುಪದೆ ಇದ್ದಲ್ಲಿ ಇದನ್ನೆ ನೋಟಿಸ್ ಎಂದು ಪರಿಗಣಿಸತಕ್ಕದ್ದು.

ಒಂದು ವೇಳೆ ಸದರಿ ದಿನಾಂಕದೊಳಗಾಗಿ ನವೀಕರಣ ಶುಲ್ಕ ಪಾವತಿಸಿದಿದ್ದಲ್ಲಿ ಫೆಬ್ರವರಿ 1 ರಿಂದ ದಂಡ ರೂ.5000=00 ಗಳನ್ನು ನವೀಕರಣ ಶುಲ್ಕದೊಂದಿಗೆ ಪಾವತಿಸಲು ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಗದಗ ಉಪವಿಭಾಗ, ಗದಗ ಅವರ ಕಚೇರಿ ಎ.ಪಿ.ಎಂಸಿ ಯಾರ್ಡ್, ಗದಗ ಅಥವಾ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಗದಗ ಅವರ ಕಚೇರಿ, ಕೊಠಡಿ ಸಂ.125 ಜಿಲ್ಲಾಡಳಿತ ಭವನ ಗದಗ ರವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಕಾರಿ ಸಂಘಕ್ಕೆ ಅವಿರೋಧ ಆಯ್ಕೆ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ರಾಮಗೇರಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಸೋಮವಾರ ಸಂಘದ ಕಚೇರಿಯಲ್ಲಿ ಚುನಾವಣೆ ಪ್ರಕ್ರಿಯೆ ಜರುಗಿ ನೂತನ ಅಧ್ಯಕ್ಷರಾಗಿ ಮಹೇಂದ್ರ ಬೆಟಗೇರಿ, ಉಪಾಧ್ಯಕ್ಷರಾಗಿ ಹನುಮಂತಪ್ಪ ಹಿತ್ತಲಮನಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಬಿ.ಆರ್. ನಿಡಗುಂದಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೋಮವಾರ ನಡೆದ ಚುನಾವಣೆ ಪ್ರಕ್ರಿಯೆಯಲ್ಲಿ 12 ಜನ ಸದಸ್ಯರು ಪಾಲ್ಗೊಂಡಿದ್ದರು. ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಒಂದೊಂದೇ ನಾಮಪತ್ರ ಸಲ್ಲಿಕೆಯಾದ ಹಿನ್ನೆಲೆಯಲ್ಲಿ ಅವಿರೋಧ ಆಯ್ಕೆಯನ್ನು ಘೋಷಿಸಲಾಯಿತು.

ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ನೂತನ ಸದಸ್ಯರು ಮತ್ತು ಸಹಕಾರಿ ಮುಖಂಡರು ಅಭಿನಂದಿಸಿದರು.

ಈ ವೇಳೆ ಹಿರಿಯ ಮುಖಂಡ ಬಸಣ್ಣ ಬೆಟಗೇರಿ, ಸೋಮೇಶ ಉಪನಾಳ, ಬಿ.ಎಂ. ಶಿಗ್ಲಿ, ಬಸವರಾಜ ಬೆಟಗೇರಿ, ಗದಿಗೆಪ್ಪ ಯತ್ನಳ್ಳಿ, ಶಿವಾನಂದ ಹರ್ತಿ, ವಿಜಯ ಮೆಕ್ಕಿ, ಆಡಳಿತ ಮಂಡಳಿ ಸದಸ್ಯರಾದ ಪರಸಪ್ಪ ಗೋಂದಿ, ಪ್ರಕಾಶ ಕಾಗದ, ಮಲ್ಲಿಕಾರ್ಜುನ ಅಂಗಡಿ, ರವೀಂದ್ರ ಗೊಜಗೊಜಿ, ಶೇಖಪ್ಪ ಕಾಳೆ, ಕಲ್ಲವ್ವ ಬಾಲಣ್ಣವರ, ಚನ್ನವ್ವ ಕಾಳೆ, ಶಿವಾನಂದಯ್ಯ ಕಳ್ಳಿಮಠ, ದತ್ತಪ್ಪ ದೊಡ್ಡಮನಿ, ನಾಗರಾಜ ಹರ್ತಿ ಮುಂತಾದವರಿದ್ದರು.


## ವೇಮನರ ಚಿಂತನೆಗಳನ್ನು ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನುಕುಲದ ಸಂತ ಮಹಾಯೋಗಿ ವೇಮನರು ತಮ್ಮ ವಚನಗಳ ಮೂಲಕ ಮಾನವ ಸಮಾಜದ ಶ್ರೇಯೋಭಿವೃದ್ಧಿಗೆ ಶ್ರಮಿಸಿದ್ದಾರೆ ಎಂದು ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಹೇಳಿದರು.

ಅವರು ಪಟ್ಟಣದ ಪುರಸಭೆಯಲ್ಲಿ ಯೋಗಿ ವೇಮನರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಶ್ರೇಷ್ಠ ವಚನಕಾರ ಹಾಗೂ ಸಮಾಜ ಚಿಂತಕರಾಗಿದ್ದ ಅವರು ಸಮಾಜದಲ್ಲಿನ ಅಜ್ಞಾನ-ಅಂಧಕಾರ, ಮೂಢನಂಬಿಕೆ, ಅಂಕು-ಡೊಂಕುಗಳನ್ನು ತಿದ್ದುವ ಮೂಲಕ ಸಾಮಾಜಿಕ ಪ್ರಗತಿಗೆ ಶ್ರಮಿಸಿದ್ದಾರೆ. ವೇಮನರ ವಿಚಾರ-ಚಿಂತನೆಗಳು ವೇದಗಳೇ ಆಗಿದ್ದು, ಬದುಕಿನಲ್ಲಿ ಅಳವಡಿಸಿಕೊಂಡು ಸಾಗಬೇಕು ಎಂದರು.

ಈ ವೇಳೆ ಪುರಸಬೆ ಮಾಜಿ ಸದ್ಯರಾದ ಮಹೇಶ ಸೋಮಕ್ಕನವರ ಮಾತನಾಡಿದರು. ಹಿರಿಯರಾದ ಬಿ.ಎನ್. ರಾಟಿ, ಪ್ರಶಾಂತಗೌಡ ನರಸಮ್ಮನವರ, ಪುರಸಭೆ ಸಿಬ್ಬಂದಿ ಹನಮಂತಪ್ಪ ನಂದೆಣ್ಣವರ, ಹೇಮರಾಜ ಅಣ್ಣಿಗೇರಿ, ನೇತ್ರಾ ಹೊಸಮನಿ, ಉಮಾ ಬೆಳವಿಗಿ, ಲಲಿತಕ್ಕ ಶೇಳಕೆ, ಮಂಜಣ್ಣ ಕೆರಕನವರ, ಪ್ರವೀಣ ಲಮಾಣಿ, ಮಹೇಶ ಹೊಸಮನಿ, ರಜಿಯಾ, ಲಕ್ಷ್ಮೀ ಓದು, ಇಂದ್ರಾ ಸವಣೂರ ಇದ್ದರು.



## ಪ್ರಜ್ವಲ್ ರಿತ್ತಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇತ್ತೀಚೆಗೆ ಮನೆ ನಿರ್ಮಾಣ ಕಾಮಗಾರಿಯ ಸಂದರ್ಭದಲ್ಲಿ ಸಿಕ್ಕಿದ್ದ ಚಿನ್ನಾಭರಣ ಹಾಗೂ ಬಂಗಾರದ ನಾಣ್ಯಗಳನ್ನು ಸರಕಾರಕ್ಕೆ ಒಪ್ಪಿಸಿದ ಪ್ರಜ್ವಲ್ ರಿತ್ತಿಯನ್ನು ಇಲ್ಲಿಯ ಗದಗ ತಾಲೂಕು ಉಣ್ಣೆ ಔದ್ಯೋಗಿಕ ಸಹಕಾರಿ ಸಂಘವು ಸನ್ಮಾನಿಸಿ ಗೌರವಿಸಿತು.

ಬಜಾರ ರಸ್ತೆಯಲ್ಲಿ ನೂತನವಾಗಿ ಆರಂಭವಾದ ಸಹಕಾರಿ ಸಂಘದಲ್ಲಿ ದತ್ತಾತ್ರೇಯ ಜೋಶಿ ಅವರ ನೇತೃತ್ವದಲ್ಲಿ ನಡೆದ ಸತ್ಯನಾರಾಯಣ ಹಾಗೂ ನವಗ್ರಹ ಪೂಜಾ ಕಾರ್ಯಕ್ರಮದಲ್ಲಿ ಪ್ರಜ್ವಲ್ ರಿತ್ತಿಯನ್ನು ಸನ್ಮಾನಿಸಿದರು.

ಮಾಜಿ ಸಚಿವ ಬಿ.ಆರ್. ಯಾವಗಲ್, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸಿದ್ಧಲಿಂಗೇಶ್ವರ ಪಾಟೀಲ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ರವಿ ದಂಡಿನ, ವೀರಯ್ಯ ಗಂಧದ, ಮಹೇಶ ಮುಸ್ಕಿನಭಾವಿ, ಬಸವರಾಜ ಮುಳ್ಳಾಳ, ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಉಮಚಗಿ, ಉಪಾಧ್ಯಕ್ಷ ಕೊಟ್ರಪ್ಪ ಬೆನ್ನಳ್ಳಿ, ನಿರ್ದೇಶಕರಾದ ನಾಗರಾಜ ಖಂಡು, ರಾಘವೇಂದ್ರ ವಿಠೋಜಿ, ಕೇಶವ ಗುದಗಿ, ಮಂಜುನಾಥ ಕರಿಯಲ್ಲಪ್ಪನವರ, ಹನುಮಂತ ಗಾಜಿ, ರವಿರಾಜ ಕಟಿಗ್ಗಾರ, ಫಕ್ಕೀರಪ್ಪ ಬಾಳಿಕಟ್ಟಿ, ಶಾರದಾ ತೋಫಿನ, ಮಲ್ಲಿಕಾರ್ಜುನ ಬಿನ್ನಾಳ, ರೇಣುಕಾ ಗರ್ಜಪ್ಪನವರ, ಸುಭಾಸ ಸತ್ಯಣ್ಣವರ, ಶರಣಪ್ಪ ಭಜಂತ್ರಿ ಪಾಲ್ಗೊಂಡಿದ್ದರು.

ಲಕ್ಷ್ಮೇಶ್ವರದಲ್ಲಿ ನಡೆದ ಬೃಹತ್ ಹಿಂದೂ ಸಮ್ಮೇಳನದಲ್ಲಿ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಮಹಾಸ್ವಾಮಿಗಳ ನುಡಿ

# ವಿಜ್ಞಾನ ಎಷ್ಟೇ ಮುಂದುವರೆದಿದ್ದರೂ ಹಿಂದೂ ಧರ್ಮವೇ ಮೂಲಾಧಾರ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸನಾತನ ಹಿಂದೂ ಧರ್ಮ ಅತ್ಯಂತ ಶ್ರೇಷ್ಠವಾದ ಪರಂಪರೆಯನ್ನು ಹೊಂದಿದ್ದು, ನಮ್ಮ ಧರ್ಮದ ಧೀಶಕ್ತಿಯನ್ನರಿತು ನಾನು ಹಿಂದೂ ಎಂಬ ಅಭಿಮಾನ, ಸ್ವಾಭಿಮಾನದಿಂದ ಪ್ರತಿಯೊಬ್ಬರೂ ಬದುಕಬೇಕು ಎಂದು ಗದಗ ಶ್ರೀ ರಾಮಕೃಷ್ಣ ವಿವೇಕಾನಂದಾಶ್ರಮದ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದ ಶ್ರೀ ಸೋಮೇಶ್ವರ ತೇರಿನ ಮನೆಯ ಹತ್ತಿರ ನಡೆದ ಬೃಹತ್ ಹಿಂದೂ ಸಮ್ಮೇಳನದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಭೌದ್ಧಿಕ, ಆಧ್ಯಾತ್ಮಿಕ, ಸಾಂಸ್ಕೃತಿಕ, ವೈಜ್ಞಾನಿಕ ಎಲ್ಲ ಕ್ಷೇತ್ರಗಳಲ್ಲಿ ಶ್ರೀಮಂತಿಕೆ ಹೊಂದಿದ ಹಿಂದೂ ಧರ್ಮ ಜಗತ್ತಿನ ಉಳಿದೆಲ್ಲ ದೇಶಗಳಿಗೆ ಮುಖವಾಣಿಯಾಗಿದೆ. ಹಿಂದೂ ಧರ್ಮ ಅಪರಿಮಿತ, ಸೀಮಾತೀತ, ಶಾಶ್ವತವಾಗಿದೆ. ಹಿಂದೂ ಧರ್ಮ ಸಕಲ ಜೀವರಾಶಿ, ಪ್ರಕೃತಿ ಸೇರಿ ಎಲ್ಲದರಲ್ಲಿ ಶ್ರೇಷ್ಠತೆಯನ್ನೇ ಸಾಧಿಸಿದೆ. ಇಂದು ವಿಜ್ಞಾನ ಎಷ್ಟೇ ಮುಂದುವರೆದಿದ್ದರೂ ಸತಾನತ ಹಿಂದೂ ಧರ್ಮವೇ ಮೂಲಾಧಾರವಾಗಿದೆ. ವಿಜ್ಞಾನ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆಧ್ಯಾತ್ಮಿಕ ಚಿಂತಕ ಚಂದ್ರಣ್ಣ ಮಹಾಜನಶೆಟ್ಟರ ಮಾತನಾಡಿ, ವಿವಿಧತೆಯಲ್ಲಿ ಏಕತೆಯನ್ನು ಹೊಂದಿದ ಹಿಂದೂ ರಾಷ್ಟ್ರ ವಿಶ್ವಮಾನವತೆಯನ್ನು ಸಾರಿದೆ. ಈಗಲೂ ಸಹ ನಮ್ಮೊಳಗೆ ಧರ್ಮದ ವಿಷಬೀಜ ಬಿತ್ತುತ್ತಿದ್ದು ಎಚ್ಚರಿಕೆಯಿಂದ ಕಿತ್ತುಹಾಕಬೇಕಿದೆ. ಹಿಂದೂ ಧರ್ಮ, ಸಂಸ್ಕೃತಿ, ದೇವಾಲಯ, ಶಿಕ್ಷಣ, ಸಂಪತ್ತು, ಶಿಲ್ಪಕಲೆಗಳ ಮೇಲೆ ಮೇಲೆ ಎಷ್ಟೇ ಘೋರವಾದ ದಾಳಿಯಾಗಿದ್ದರೂ ಕಾಲಕಾಲಕ್ಕೆ ದೇವಮಾನರಾಗಿ ಅವತರಿಸಿದ ಮಹಾಪುರುಷರು ಅವೆಲ್ಲವನ್ನೂ ಹಿಮ್ಮೆಟ್ಟಿಸಿದ್ದಾರೆ. ಹಿಂದೂ ಧರ್ಮದ ಬೆಳಕು ವಿಶ್ವಕ್ಕೆಲ್ಲ ಬೆಳಕು ನೀಡುತ್ತಿದೆ ಎಂದರು.

ಹಿಂದೂ ಧರ್ಮದ ತುಣುಕಷ್ಟೇ. ನಮ್ಮ ದೇಶ, ಧರ್ಮ, ಗುರುಪರಂಪರೆಯ ಹಿರಿಮೆ-ಗರಿಮೆಯನ್ನು ಜಗತ್ತಿಗೆ ಸಾರಿದ ವಿವೇಕಾನಂದರನ್ನು ಓದಿದರೆ ನಮ್ಮ ರಕ್ತದ/ಧರ್ಮದ ಶ್ರೇಷ್ಠತೆ ಅರಿವಾಗುತ್ತದೆ.

ಈ ಪುಣ್ಯಭೂಮಿಯಲ್ಲಿ ಸಿಂಹದಂತೆ ಬದುಕಬೇಕಾದ ನಾವೆಲ್ಲ ನರಿ-ಕುರಿಗಳಂತೆ ಬದುಕುತ್ತಿದ್ದೇವೆ. ಕೆಲ ಕಾವಿಧಾರಿಗಳು, ಬುದ್ಧಿಜೀವಿಗಳೆನಿಸಿಕೊಂಡವರು ನಮ್ಮನ್ನು ಮತಿಗೇಡಿಗಳನ್ನಾಗಿಸುತ್ತಿದ್ದಾರೆ. ಜಗತ್ತಿನ ಶ್ರೀಮಂತ ದೇಶಗಳು, ವಿಶ್ವಮಾನ್ಯರೂ ಸಹ ಭಾರತವನ್ನು ಆಧರಿಸುತ್ತಿವೆ. ಹಿಂದೂ ಧರ್ಮದ ಸಾರ ಸಂಗ್ರಹ ಉನ್ನತಮಟ್ಟದ ಜ್ಞಾನ, ಆನಂದ, ಆತ್ಮಸ್ಥೈರ್ಯ ನೀಡುತ್ತದೆ. ಇನ್ನಾದರೂ ಧರ್ಮದ ಶ್ರೇಷ್ಠತೆ, ನಮ್ಮತನ, ಸ್ವರಕ್ಷಣೆಗಾಗಿ ಹೊಸ ಜೀವನಸ ಸಂಕಲ್ಪಕ್ಕೆ ದಿಟ್ಟಹೆಜ್ಜೆ ಇಡೋಣ ಎಂದರು.

ಕಾರ್ಯಕ್ರಮದ ದಿಕ್ಸೂಚಿ



ನುಡಿಗಳನ್ನಾಡಿದ ಧಾರವಾಡ ವಿಭಾಗ ಸಂಘ ಸಂಚಾಲಕ ಗೋವಿಂದಪ್ಪ ಗೌಡಪ್ಪಗೋಳ, 100 ವರ್ಷಗಳ ಹಿಂದೆ ಹಿಂದೂ ಧರ್ಮ ಸಂಘಟನೆ ಮಾಡುವದೇ ಅಪರಾಧ ಎನ್ನುವ ಭಾವನೆ ಕಾಡುತ್ತಿತ್ತು. ಅಂತಹ ವೇಳೆಯಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಹರಿಕಾರ ಡಾ. ಕೇಶವ ಬಲಿರಾಂ ಹೆಡಗೆವಾರ ಬಿತ್ತಿದ ಹಿಂದೂ ಧರ್ಮದ ಶ್ರೇಷ್ಠವಾದ ಸಸಿ ಇಂದು ಆಲದ ಮರದಂತೆ ಎಲ್ಲರಿಗೂ ನೆರಳಾಗಿ ಹೆಮ್ಮರವಾಗಿ ಬೆಳೆದು ನಿಂತಿದೆ. ನಾವೆಲ್ಲ ಬಂಧುಗಳೆಂಬ ಭಾವನೆಯೊಂದಿಗೆ ಧರ್ಮದ ಸಂಘಟನೆ-ರಕ್ಷಣೆಯ ಜತೆಗೆ ರಾಷ್ಟ್ರವನ್ನು ಉತ್ತುಂಗಕ್ಕೇರಿಸುವ ಸಂಕಲ್ಪದೊಂದಿಗೆ ಬಾಳಬೇಕು ಎಂದರು.

ಶಾಸಕ ಡಾ.ಚಂದ್ರು ಲಮಾಣಿ, ಸಣ್ಣೀರಪ್ಪ ಹಳ್ಳೆಪ್ಪನವರ, ಎಂ.ಎಸ್. ದೊಡ್ಡಗೌಡ್ರ, ಬಸಣ್ಣ ಬೆಟಗೇರಿ, ಲೋಹಿತ್ ನೆಲವಿಗಿ, ಶಂಕರ ಬ್ಯಾಡಗಿ, ನಿಂಬಣ್ಣ ಮಡಿವಾಳರ, ಮಹದೇವಪ್ಪ ಬೆಳವಿಗಿ ಸೇರಿ ಗಣ್ಯಮಾನ್ಯರು, ಹಿರಿಯರು, ಹಿಂದೂಪರ ಸಂಘಟನೆಗಳವರು ಇದ್ದರು. ಈರಣ್ಣ ಗಾಣಿಗೇರ, ವೈ.ಪಿ. ನೆಗಳೂರ, ಗಂಗಾಧರ ಮೆಣಸಿನಕಾಯಿ, ಷಣ್ಮುಕ ಗಡ್ಡೆಣ್ಣವರ ನಿರೂಪಿಸಿದರು.

## ಸಚಿವ ಜಮೀರ್ ಅಹ್ಮದ್ ಖಾನ್‌ರಿಗೆ ಭವ್ಯ ಸ್ವಾಗತ



■ ವಿಜಯಸಾಕ್ಷಿ ಸುದ್ದಿ, ಗದಗ

ವಸತಿ ಹಾಗೂ ವಕ್ಫ್ ಸಚಿವರಾದ ಬಿ.ಝಡ್. ಜಮೀರ್ ಅಹ್ಮದ್ ಖಾನ್ ಅವರು ಮಂಗಳವಾರ ಗದಗ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ, ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಗದಗ ಜಿಲ್ಲಾ ಘಟಕದ ವತಿಯಿಂದ ಸಚಿವರಿಗೆ ಆತ್ಮೀಯ ಸ್ವಾಗತವನ್ನು ಕೋರಲಾಯಿತು.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಜಿಲ್ಲಾಧ್ಯಕ್ಷ ಜಾಫರ್ ಡಾಲಾಯತ್, ಉಪಾಧ್ಯಕ್ಷ ಕುತ್ಬುದ್ದೀನ್ ಶೇಖ್, ಗದಗ ಶಹರ ಅಧ್ಯಕ್ಷ ತಾಜುದ್ದೀನ್ ಪಾಪಣ್ಣವರ, ಪ್ರಧಾನ ಕಾರ್ಯದರ್ಶಿ ರಿಯಾಜ್ ಅಹ್ಮದ್ ದೊಡ್ಡಮನಿ, ಹಿರಿಯರಾದ ಮೆಹಬೂಬ ಬಾದಷಾ ಖಾಜಿ, ಸೈಯದ್ ಪೀರಜಾದೆ ಶಬ್ಬೀರ್ ಅಬ್ಬಿಗೇರಿ, ಬಾಬಾಜಾನ ಕಿತ್ತೂರ, ಸಮೀರ್ ಚಟ್ನಾಳ, ಪದಾಧಿಕಾರಿಗಳಾದ ರಫೀಕ್ ಈಟಿ, ನಾಸಿರ್ ನರೇಗಲ್, ಮೊಹಮ್ಮದ್ ಅಸ್ಲಂ ದಂಡಿನ, ಮೀರಾ ಸಾಬ್ ಇರಕಲ್, ನಿಜಾಮುದ್ದೀನ್ ಕಾಟಾಪುರ ಮುಂತಾದವರಿದ್ದರು.

### ಮಾರನಬಸರಿ ಅಂಗನವಾಡಿ ಕೇಂದ್ರದಲ್ಲಿ ಸರಕಾರಿ ಪೂರ್ವ ಪ್ರಾಥಮಿಕ ಶಾಲೆ ಉದ್ಘಾಟಿಸಿದ ಸಂಗನಗೌಡ ಪಾಟೀಲ

# ಬಡತನ ನಿರ್ಮೂಲನೆಗೆ ಅಕ್ಷರ ಜ್ಞಾನ ಅವಶ್ಯ

■ ವಿಜಯಸಾಕ್ಷಿ ಸುದ್ದಿ, ರೋಣ

ಕರ್ನಾಟಕ ಸರಕಾರ ರಾಜ್ಯದ ಅಂಗನವಾಡಿಗಳಲ್ಲಿಯೂ ಸರಕಾರಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಆರಂಭಿಸಬೇಕು ಎಂಬ ದೃಢ ಚಿಂತನೆಯೊಂದಿಗೆ ಕಾರ್ಯ ಆರಂಭಿಸಿದ್ದು, ತಾಲೂಕಿನಲ್ಲಿ 15 ಅಂಗನವಾಡಿ ಕೇಂದ್ರಗಳನ್ನು ಆಯ್ಕೆ ಮಾಡಿಕೊಂಡಿದ್ದು ಸ್ವಾಗತರ್ಹ ಬೆಳವಣಿಗೆಯಾಗಿದೆ ಎಂದು ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಹೇಳಿದರು.

ಅವರು ಸಮೀಪದ ಮಾರನಬಸರಿ ಗ್ರಾಮದ 284ನೇ ಅಂಗನವಾಡಿ ಕೇಂದ್ರದಲ್ಲಿ ಸರಕಾರಿ ಪೂರ್ವ ಪ್ರಾಥಮಿಕ ಶಾಲೆ ಉದ್ಘಾಟನೆ ಹಾಗೂ ಕೇಂದ್ರದ ಮಕ್ಕಳಿಗೆ ಶಾಲಾ ಬ್ಯಾಗ್, ಶೈಕ್ಷಣಿಕ ಪರಿಕರಗಳ ವಿತರಣೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಭಾಗಗಳಲ್ಲಿ ಬಡವರು, ಕೂಲಿ ಕಾರ್ಮಿಕರ ಮಕ್ಕಳು ಹೆಚ್ಚಿರುತ್ತಾರೆ. ಇದನ್ನರಿತ ಸರಕಾರ ಬಡವರ ಮಕ್ಕಳು ಅಕ್ಷರ ಜ್ಞಾನದಿಂದ ಹಿಂದೆ ಸರಿಯಬಾರದು



ಮತ್ತು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಮಹತ್ವದ ಉದ್ದೇಶ ಹೊಂದಿ, ಗ್ರಾಮೀಣ ಭಾಗಗಳಲ್ಲಿಯೂ ಒಳ್ಳೆಯ ಶಿಕ್ಷಣ ದೊರಕಬೇಕು ಎಂಬ ನಿಟ್ಟಿನಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಆರಂಭಿಸಿದೆ ಎಂದರು.

ಸರಕಾರಿ ಶಾಲೆಗಳಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಪಡೆಯಬೇಕು ಎಂಬ ನಿಟ್ಟಿನಲ್ಲಿ ಅಕ್ಷರ ಜ್ಞಾನಕ್ಕೆ ಮಹತ್ವ ನೀಡುತ್ತಿದೆ. ಇದನ್ನು ಮಕ್ಕಳ ಪಾಲಕರು ಅರಿತುಕೊಂಡು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಮುಂದಾಗಬೇಕು ಎಂದು ಆಶಿಸಿದರು.

ತಾ.ಪಂ ಇಒ ಚಂದ್ರಶೇಖರ ಕಂದಕೂರ ಮಾತನಾಡಿ, ಬಡವರಾಗಿ ಹುಟ್ಟುವುದು ತಪ್ಪಲ್ಲ, ಬಡವರಾಗಿ ಮರಣ ಹೊಂದುವುದು ತಪ್ಪು. ಬಡತನ ನಿರ್ಮೂಲನೆಗೆ ಬಲವಾದ ಅಸ್ತ್ರ ಶಿಕ್ಷಣ ಎಂಬುದನ್ನು ಪಾಲಕರು ತಿಳಿದುಕೊಳ್ಳುವುದು ಅವಶ್ಯಕವಾಗಿದೆ. ಗ್ರಾಮೀಣ ಭಾಗಗಳ ಅಂಗನವಾಡಿ ಕೇಂದ್ರಗಳಲ್ಲಿ ಸರಕಾರ ಪೂರ್ವ ಪ್ರಾಥಮಿಕ ಶಾಲೆಗಳನ್ನು ಆರಂಭಿಸುವ ಜೊತೆಗೆ ಹೊಸ ಮನ್ವಂತರವನ್ನು ತೆರೆದಿಡುತ್ತಿದೆ. ಇದರಿಂದ ಗ್ರಾಮೀಣ ಭಾಗಗಳ ಮಕ್ಕಳು ಮುಂದಿನ ದಿನಗಳಲ್ಲಿ ಶಿಕ್ಷಣದಲ್ಲಿ ಯಶಸ್ಸು ಸಾಧಿಸಲು ಸಹಾಯವಾಗುತ್ತದೆ ಎಂದರು. ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ವಹಿಸಿದ್ದರು. ಸಾನ್ನಿಧ್ಯವನ್ನು ವೇ.ಮೂ. ಚನ್ನಯ್ಯಜ್ಜನವರು ಹಿರೇಮಠ, ಸಮ್ಮುಖವನ್ನು ವೇ.ಮೂ. ವಿಶ್ವನಾಥ ಭಟ್ಟ ವೈದ್ಯ ವಹಿಸಿದ್ದರು. ಸಿಡಿಪಿಒ ಶಿವಗಂಗಮ್ಮ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಗ್ರಾಮದಲ್ಲಿ ಸರಕಾರಿ ಪೂರ್ವ ಪ್ರಾಥಮಿಕ ಶಾಲೆಯನ್ನು ಆರಂಭಿಸಿದ್ದಕ್ಕೆ ಗ್ರಾಮಸ್ಥರು ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ತಾ.ಪಂ ಇಒ ಚಂದ್ರಶೇಖರ ಕಂದಕೂರ, ಸಿಡಿಪಿಒ ಶಿವಗಂಗಮ್ಮ, ಮೇಲ್ವಿಚಾರಕಿ ಶಾರದಾ ಪವಾರ, ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ, ಉಪಾಧ್ಯಕ್ಷೆ ಮಂಜುಳಾ ಮಾದರ ಇವರನ್ನು ಸನ್ಮಾನಿಸಿದರು. ಅಂಗನವಾಡಿ ಶಿಕ್ಷಕಿಯಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಮಂಗಲಾ ವೈದ್ಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶರಣಪ್ಪ ಕುರಿ, ಶೇಖರಗೌಡ ಪಾಟೀಲ, ರೈಮಾನಸಾಬ ಮೋತೆಖಾನ್, ಎಸ್.ಎಚ್. ಹಾದಿಮನಿ, ಈರಪ್ಪ ನಿಡಗುಂದಿ, ಶಿವಕುಮಾರ ದಿಂಡೂರ, ಅಲ್ಲಾಸಾಬ ಮೋತೆಖಾನ್, ಹನಮವ್ವ ತಳವಾರ, ಕಾಶೀಮಸಾಬ ದೋಟಿಹಾಳ, ಅಡಿವೆಪ್ಪ ಜಿಗಳೂರ, ಪಿಡಿಒ ಎಸ್.ಆರ್. ಸಂಕನೂರ ಸೇರಿದಂತೆ ಮುಖ್ಯಶಿಕ್ಷಕರು, ಗ್ರಾಮದ ಮುಖಂಡರು, ಜಕ್ಕಲಿ, ಮಾರನಬಸರಿ ಗ್ರಾಮದ ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರು ಉಪಸ್ಥಿತರಿದ್ದರು.

### ಅಧಿಕಾರಿಗಳ ಕಾರ್ಯಕ್ಕೆ ಮೆಚ್ಚುಗೆ

ಮಾರನಬಸರಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಆರಂಭಗೊಂಡ ಸರಕಾರಿ ಪೂರ್ವ ಪ್ರಾಥಮಿಕ ಶಾಲೆಯ ಮಕ್ಕಳಿಗೆ ರೋಣ ತಾಲೂಕಾ ದಂಡಾಧಿಕಾರಿ ಕೆ ನಾಗರಾಜ 30 ಶಾಲಾ ಬ್ಯಾಗ್ ಸೇರಿದಂತೆ ಶೈಕ್ಷಣಿಕ ಚಟುವಟಿಕೆಗಳ 'ಪೂರಕ ವಸ್ತುಗಳನ್ನು ಸ್ವತಃ ನೀಡಿದ್ದರು. ಸಿಡಿಪಿಒ ಶಿವಗಂಗಮ್ಮ ಸಹ 30 ಮಕ್ಕಳಿಗೆ ಕುಡಿಯುವ ನಿರಿನ ಬಾಟಲ್ ವಿತರಿಸಿದ್ದನ್ನು ಸ್ಮರಿಸಿದ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಅಧಿಕಾರಿಗಳ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

### ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ಉಪನಿರ್ದೇಶಕಿ ಡಾ.ನಂದಾ ಹನಬರಟ್ಟಿ ಅವರ ಕಾರ್ಯಕ್ಕೆ ಪ್ರಶಂಸೆ

# ಸಾರ್ವಜನಿಕರಿಗೆ ಕಾರ್ಟೂನ್ ಚಿತ್ರಗಳ ಮೂಲಕ ಜಾಗೃತಿ




■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚಿನ ದಿನಗಳಲ್ಲಿ ತಾಲೂಕಾ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಕರ್ತವ್ಯದ ಒತ್ತಡಗಳ ಮಧ್ಯೆಯೂ ಸಾರ್ವಜನಿಕರ ಕೆಲಸ-ಕಾರ್ಯಗಳನ್ನು ಮಾಡುತ್ತಿದ್ದಾರೆ. ಇಂತಹ ಒತ್ತಡಗಳ ನಡುವೆಯೇ ತಮ್ಮ ಕರ್ತವ್ಯದ ಜೊತೆಗೆ ಕಾರ್ಟೂನ್‌ಗಳನ್ನು ಬಿಡಿಸಿ ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸುತ್ತಿದ್ದಾರೆ ಶಿರಹಟ್ಟಿ ಮತಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ನಂದಾ ಹನಬರಟ್ಟಿ ತಮ್ಮ ಕರ್ತವ್ಯದ ಬಿಡುವಿನ ವೇಳೆ ಡಾ.ನಂದಾ ಹನಬರಟ್ಟಿ ಮತದಾನದ ಪ್ರಮಾಣವನ್ನು ಹೆಚ್ಚಳ ಮಾಡುವುದಕ್ಕೆ ವಿಶೇಷ ಕಾರ್ಟೂನ್‌ಗಳನ್ನು ರಚಿಸಿ ಅವುಗಳನ್ನು ಸಾಮಾಜಿಕ ಜಾಲತಾಣಗಳ ಮೂಲಕ, ಅಧಿಕಾರಿಗಳ ಗ್ರೂಪ್‌ಗಳ ಮೂಲಕ, ಹೊಸದಾಗಿ ಸೇರ್ಪಡೆಗೊಳ್ಳುವ ಮತದಾರರಲ್ಲಿ, ವಿಶೇಷವಾಗಿ ಎಸ್‌ಸಿ/ಎಸ್‌ಟಿ ಕಾಲೋನಿಗಳಿಗೆ ತೆರಳಿ ಮತದಾರರ ಮತ್ತು ಮತದಾನದ ಕುರಿತು ವಿಶೇಷ ಜಾಗೃತಿಯನ್ನು ಮೂಡಿಸುತ್ತಿರುವುದು ಸಾರ್ವಜನಿಕ ವಲಯದಲ್ಲಿ ಪ್ರಶಂಸೆಗೆ ಪಾತ್ರರಾಗುತ್ತಿದ್ದಾರೆ.

ಚಿತ್ರಕಲೆಯು ಅವರ ಹವ್ಯಾಸ ವಾಗಿದ್ದರಿಂದ ಹಾಗೂ ಮತದಾರರ ನೋಂದಣಾಧಿಕಾರಿಯಾಗಿ ಕೆಲಸ ಮಾಡುತ್ತಿರುವದರಿಂದ ಮತದಾನದ ಪ್ರಮಾಣ ಕಡಿಮೆ ಇರುವಂತಹ ಮತಗಟ್ಟೆ ಕೇಂದ್ರಗಳಿಗೆ ತೆರಳಿ ಸಾರ್ವಜನಿಕರೊಂದಿಗೆ ತಾವೇ ಪರಿಶೀಲನೆ ನಡೆಸಿ ಅವರಲ್ಲಿ ಜಾಗೃತಿಯನ್ನು ಮೂಡಿಸುವುದಕ್ಕೆ ತಾವೇ ಚಿತ್ರಿಸಿದ ಕಾರ್ಟೂನ್‌ಗಳ ಮೂಲಕ ಜಾಗೃತಿ ಮೂಡಿಸುತ್ತಿದ್ದಾರೆ.

ಇವರ ಈ ಕಾರ್ಯಕ್ಕೆ ಜಿಲ್ಲಾಧಿಕಾರಿ ಸೇರಿದಂತೆ ಇಲಾಖೆಯ ಹಿರಿಯ ಅಧಿಕಾರಿಗಳು ಪ್ರೋತ್ಸಾಹ ನೀಡುತ್ತಿದ್ದು, ಇನ್ನೂ ಹೆಚ್ಚೆಚ್ಚು ಚಿತ್ರ ಬಿಡಿಸಿ ಅವುಗಳನ್ನು ಪ್ರದರ್ಶಿಸುವ ಮೂಲಕ ಜಾಗೃತಿ ಮೂಡಿಸುವಂತೆ ಪ್ರಶಂಸೆ ವ್ಯಕ್ತಪಡಿಸುತ್ತಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಹಾಗೂ ಶಿರಹಟ್ಟಿ ಮತಕ್ಷೇತ್ರ ಮತದಾರರ ನೋಂದಣಾಧಿಕಾರಿ ಡಾ.ನಂದಾ ಹನಬರಟ್ಟಿ, ಚಿತ್ರಕಲೆ ನನ್ನ ಹವ್ಯಾಸವಾಗಿದ್ದು, ಮತದಾನದ ಮತ್ತು ಮತದಾರರ ಮಹತ್ವ ಕುರಿತು ವಿಶೇಷ ಕಾರ್ಟೂನ್‌ಗಳನ್ನು ರಚಿಸಿ ಅವುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಕಡಿಮೆ ಮತದಾನ ಪ್ರಮಾಣ ಇರುವ ಸ್ಥಳಗಳಲ್ಲಿ, ಹೊಸದಾಗಿ ಸೇರ್ಪಡೆಯಾಗುವ ಮತದಾರರಿಗೆ ಜಾಗೃತಿಯನ್ನು ಮೂಡಿಸಲಾಗುತ್ತಿದ್ದು, ಮತದಾನದ ಪ್ರಮಾಣ ಹೆಚ್ಚಳ ಮಾಡುವುದು ಇದರ ಉದ್ದೇಶವಾಗಿದೆ ಎಂದರು.

# ಮತದಾರರ ಮ್ಯಾಪಿಂಗ್ ಕಾರ್ಯದಲ್ಲಿ ಪ್ರಗತಿ ಸಾಧಿಸಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಚುನಾವಣಾ ಆಯೋಗದ ನಿರ್ದೇಶನದಂತೆ 2002ರ ಮತದಾರರ ಯಾದಿಗೆ 2025ರ ಮತದಾರರ ಯಾದಿಗಳ ಮ್ಯಾಪಿಂಗ್ ಕಾರ್ಯದಲ್ಲಿ ಶಿರಹಟ್ಟಿ ಮತಕ್ಷೇತ್ರದಲ್ಲಿ 23 ಮತಗಟ್ಟೆ ಕೇಂದ್ರಗಳು ಶೇ.50ಕ್ಕಿಂತ ಕಡಿಮೆ ಪ್ರಗತಿ ಸಾಧಿಸಿದ್ದು, ಇನ್ನೂ ಹೆಚ್ಚಿನ ಪ್ರಗತಿ ಸಾಧಿಸಲು ಕಡ್ಡಾಯವಾಗಿ ಮನೆ ಮನೆಗೆ ತೆರಳಿ ಮತದಾರರ ಮ್ಯಾಪಿಂಗ್ ಕಾರ್ಯದಲ್ಲಿ ಪ್ರಗತಿ ಸಾಧಿಸಬೇಕೆಂದು ಶಿರಹಟ್ಟಿ-65 ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯ ತಹಸೀಲ್ದಾರ ಕಚೇರಿಗೆ ಭೇಟಿ ನೀಡಿ ಚುನಾವಣಾ ಸಿಬ್ಬಂದಿಗಳೊಂದಿಗೆ ಶಿರಹಟ್ಟಿಯಲ್ಲಿ ಮತದಾರರ ಮ್ಯಾಪಿಂಗ್ ಪ್ರಗತಿಯಲ್ಲಿ ಕಡಿಮೆ ಪ್ರಗತಿ ಸಾಧಿಸಿದ ಮತಗಟ್ಟೆ ಸಂಖ್ಯೆ-14 ಹಾಗೂ 22ರಲ್ಲಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಶಿರಹಟ್ಟಿ ಮತಕ್ಷೇತ್ರದಲ್ಲಿ ಒಟ್ಟು 233309 ಮತದಾರರಿದ್ದು, ಇದರಲ್ಲಿ ಈಗಾಗಲೇ 90583 ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದೆ. 153173 ಮತದಾರರ ಮ್ಯಾಪಿಂಗ್ ಕಾರ್ಯ ಮತ್ತು ಪ್ರೋಜಿನಿ ಕಾರ್ಯ ಆಗಿದೆ. ಒಟ್ಟಾರೆ ಕ್ಷೇತ್ರದ ಮ್ಯಾಪಿಂಗ್ ಪ್ರಗತಿ 73,69, ಪ್ರೋಜಿನಿ ಪ್ರಗತಿ 65.65 ಆಗಿದೆ. ಬಾಕಿ ಉಳಿದ, ಶೇ.50ಕ್ಕಿಂತ ಕಡಿಮೆ ಪ್ರಗತಿ ಸಾಧಿಸಿದ ಮತಗಟ್ಟೆ ಸಿಬ್ಬಂದಿಗಳು 4 ದಿನಗಳ ಒಳಗಾಗಿ ಪ್ರಗತಿಯನ್ನು ಸಾಧಿಸಬೇಕು.

ಜ.25ರಂದು ಜರುಗಲಿರುವ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಶಿರಹಟ್ಟಿಯ ಡಿ.ದೇವರಾಜ ಅರಸು ಭವನದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಅದಕ್ಕೂ ಮೊದಲು ಪ್ರಮುಖ ಬೀದಿಗಳಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಸಲುವಾಗಿ ನಾನೇ ಬಿಡಿಸಿರುವ ವಿಶೇಷ ಕಾರ್ಟೂನ್ ಪ್ರದರ್ಶನದೊಂದಿಗೆ ಜಾಥಾ ಮೆರವಣಿಗೆ ನಡೆಯಲಿದ್ದು, ಎಲ್ಲ ಅಧಿಕಾರಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ರಾಘವೇಂದ್ರ ರಾವ್, ಶಿರಸ್ತೇದಾರ ಸಂತೋಷ ಅಸ್ಕಿ, ಕಂದಾಯ ನಿರೀಕ್ಷಕ ಬಿ.ಎಂ. ಕಾತ್ರಾಳ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಪದಗ್ರಹಣ; ಸಂಭ್ರಮಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ನೂತನ ರಾಷ್ಟ್ರೀಯ ಅಧ್ಯಕ್ಷರ ಪದಗ್ರಹಣದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಕಾರ್ಯಾಲಯದ ಆವರಣದಲ್ಲಿ ಸಂಭ್ರಮಾಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್. ಕೆ. ಚವ್ಹಾಣ, ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಹಿರಿಯರಾದ ಎಂ.ಎಸ್. ಕರೀಗೌಡ್ರ, ಶ್ರೀಪತಿ ಉಡುಪಿ, ಜಗನ್ನಾಥಸಾ ಭಾಂಡಗೆ, ಎಂ.ಎಂ. ಹಿರೇಮಠ, ಬಿ.ಎಚ್. ಲದ್ವಾ, ಬಿ.ಎಸ್. ಚಿಂಚಲಿ, ಪ್ರಮುಖರಾದ ಅನಿಲ ಅಬ್ಬಿಗೇರಿ, ಅಶೋಕ ಕರೂರ, ಸಂತೋಷ ಅಕ್ಕಿ, ಶಂಕರ ಕಾಕಿ, ರಮೇಶ ಸಜ್ಜಗಾರ, ಮಂಜುನಾಥ ಶಾಂತಗೇರಿ, ನಿಂಗಪ್ಪ ಹುಗ್ಗಿ, ಈಶ್ವರಪ್ಪ ರಂಗಪ್ಪನವರ, ರಾಜು ಕುಲಕರ್ಣಿ, ವಾಯ್.ಪಿ. ಅಡ್ನೂರ, ಎಸ್.ಪಿ. ಚವಡಿ, ಮುತ್ತಣ್ಣ ಮೂಲಿಮನಿ, ರಾಚಯ್ಯ ಹೊಸಮಠ, ಡಿ.ಬಿ. ಕರೀಗೌಡ್ರ, ಮಾಧುಸಾ ಮೇರವಾಡೆ, ದೇವೇಂದ್ರಪ್ಪ ಹೂಗಾರ, ಸಂಜೀವ ಖಟವಟೆ, ಸಿದ್ದಪ್ಪ ಈರಗಾರ, ರೇಖಾ ಬಂಗಾರಶೆಟ್ಟರ, ಪದ್ಮಿನಿ ಮುತ್ತಲದಿನ್ನಿ, ಯೋಗೇಶ್ವರ ಭಾವಿಕಟ್ಟಿ, ವಿರೂಪಾಕ್ಷ ಐಲಿ, ಅಗಡಿ, ರಾಜೇಶ್ವರಿ ಹಾದಿಮನಿ, ಮಂಜುನಾಥ ಹಳ್ಳೂರಮಠ, ವಿನೋದ ಹಂಸನೂರ ಮುಂತಾದವರಿದ್ದರು.

# ಬ್ರಹ್ಮ ಭೋಜನ, ಈಶ್ವರೀಯ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು ವರ್ತಮಾನ ಸಮಯದಲ್ಲಿ ಜಾತಿ-ಬೇಧಗಳಿಂದ ಮುಕ್ತರಾಗಿ ಉನ್ನತ ಜೀವನವನ್ನು ನಡೆಸುವ ಆಧ್ಯಾತ್ಮಿಕತೆಯ ಮಾರ್ಗವಾಗಿದೆ ಎಂದು ಕಾನಿಪ ಸಂಘದ ಜಿಲ್ಲಾ ಉಪಾಧ್ಯಕ್ಷ ಪ್ರಭುಸ್ವಾಮಿ ಅರವಟಗಿಮಠ ಹೇಳಿದರು.

ಪಟ್ಟಣದ ಈಶ್ವರಿ ವಿಶ್ವವಿದ್ಯಾಲಯದಲ್ಲಿ ಸೋಮವಾರ ನಡೆದ ಬ್ರಹ್ಮ ಭೋಜನ ಹಾಗೂ ಈಶ್ವರೀಯ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಸ್ತಿ ಎಷ್ಟಿದ್ದರೇನು, ಮನುಷ್ಯನಿಗೆ ಅಗತ್ಯವಿರುವುದು ನೆಮ್ಮದಿ ಮತ್ತು ಮನಃಶಾಂತಿ. ಈಶ್ವರೀಯ ವಿಶ್ವವಿದ್ಯಾಲಯಗಳು ಮನುಷ್ಯನಲ್ಲಿ ಮನಃಶಾಂತಿ ತುಂಬುತ್ತಿವೆ. ನಾಮ ಹಲವಾದರೂ, ದೇವನೊಬ್ಬನೇ ಎಂಬ ತತ್ವದಡಿ ಮುನ್ನಡೆಯುತ್ತಿವೆ. ಮಹಿಳೆಯರ ನೇತೃತ್ವದಲ್ಲಿ ವಿಶ್ವಶಾಂತಿಗಾಗಿ




ಕೆಲಸ ಮಾಡುತ್ತಿರುವ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಜಗತ್ತಿನ ಯಾವುದೇ ಶಾಖೆಗೆ ಭೇಟಿ ನೀಡಿದರೂ ಅಧ್ಯಾತ್ಮ ಹಾಗೂ ನೆಮ್ಮದಿ ದೊರೆಯುತ್ತದೆ ಎಂದರು.

ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ ಸವಿತಕ್ಕ ಸಂದೇಶ ನೀಡಿ, ಎಲ್ಲ ಧರ್ಮಗಳೂ ಪರಮಾತ್ಮನನ್ನು ಜ್ಯೋತಿ ರೂಪದಲ್ಲಿ ಕಾಣುತ್ತವೆ. ಅಂತಹ ಜ್ಯೋತಿಯು ನಮ್ಮ ಆತ್ಮದ ಜೊತೆ ಅನುಸಂಧಾನ ಹೊಂದಬೇಕು. ಹೊರಗಿನ ಸಂಪತ್ತಿನ ಬದಲಾಗಿ, ಆಂತರಿಕ ಶಾಂತಿ ಮತ್ತು ಸಂತೃಪ್ತಿಯನ್ನು ಸಾಧಿಸುವುದೇ ಮುಖ್ಯ. ಆಧ್ಯಾತ್ಮದಿಂದ ಆಂತರಿಕ ಸಶಕ್ತೀಕರಣ ಸಾಧ್ಯವಾಗುತ್ತದೆ ಎಂದರು.

ಪತ್ರಕರ್ತ ಈಶ್ವರ ಬೆಟಗೇರಿ ಮಾತನಾಡಿದರು. ಕಾರ್ಯಕ್ರಮವನ್ನು ಕಾನಿಪ ಸಂಘದ ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಆದರ್ಶ ಕುಲಕರ್ಣಿ ಉದ್ಘಾಟಿಸಿದರು. ಕಾನಿಪ ಸಂಘದ ಪದಾಧಿಕಾರಿಗಳಿಗೆ ಸನ್ಮಾನ ಜರುಗಿತು. ಕಾನಿಪ ತಾಲೂಕ ಉಪಾಧ್ಯಕ್ಷ ಮಲ್ಲಯ್ಯ ಗುಂಡಗೋಪುರಮಠ, ಕಾರ್ಯದರ್ಶಿ ಸಂಗಮೇಶ ಮೆಣಸಿಗಿ, ಗವಿಸಿದ್ದಪ್ಪ ಗೊಡಚಪ್ಪನವರ, ಹುಚ್ಚೀರಪ್ಪ ಈಟಿ, ಎಂ.ಎಸ್. ಪೂಜಾರ, ಬಿ.ವಿ. ದೇಸಾಯಿಪಟ್ಟಿ, ಎಸ್. ಕೆ. ಪ್ರಭುಸ್ವಾಮಿಮಠ, ಮಲ್ಲಣ್ಣ ಕಾತರಕಿ, ವೀರಣ್ಣ ಹತ್ತಿಕಟಗಿ, ಹನಮಂತ ರಾಚನಗೌಡ್ರ, ರಾಮಣ್ಣ ಕುಲಕರ್ಣಿ ಸೇರಿದಂತೆ ಈಶ್ವರೀಯ ಪರಿವಾರದವರಿದ್ದರು.

ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ,**
**ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2025-26/3310

ದಿನಾಂಕ : 20-01-2026

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KW-1, KG-1,**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ **Standard Bid Document KW-1, KG-1,** ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 6 ಕಾಮಗಾರಿಗಳ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ **: 2025-26** ನೇ ಸಾಲಿನ **MGNREGA** ಯೋಜನೆ 2025-26 ನೇ ಸಾಲಿನ ಜಿಲ್ಲಾ ಪಂಜಾಯತ್ ಲಿಂಕ್ ಡಾಕ್ಯೂಮೆಂಟ್ **(2515-00-196-122-300)** ಜಿಲ್ಲಾ ಪಂಜಾಯತ್ ಅನಿರ್ಭಂದಿತ ಅನುದಾನ ಕ್ರೀಯಾ ಯೋಜನೆಯಡಿ, ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯ.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, **(https://kppp.karnataka.gov.in)** ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ. **WORK_INDENT : 23282, 23284, 23283, 23285, 23286, 9072**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **2.53** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **9.53** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **21-01-2026** ರಿಂದ **31-01-2026** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **02-02-2026** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ : 13 ರಂತೆ) ಭರಣಾ ಮಾಡಬೇಕು. ಇ-ಪದ್ದತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**
**ಪಂ.ರಾಜ್. ಇಂಜಿನೀಯರಿಂಗ್ ವಿಭಾಗ,**
**ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/548/2025-26

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka